ಸಂಪಾದಕರು: ದರ್ಶನ್.ಟಿ
Editor : DARSHAN.T

# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 140 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 15–12–2023 ಶುಕ್ರವಾರ ಪುಟ: 4 ಬೆಲೆ : ರೂ.2–00
Volume - 01 Issue - 140 Title- Code: KARKAN 28269 Chitradurga Date: 15-12-2023 Friday Page: 4 Price: Rs. 2-00

ಒಳಪುಟದ ಸುದ್ದಿಗಳು
ಡಿ.16, 17ರಂದು ಗ್ರೂಪ್–ಸಿ ಸ್ಪರ್ಧಾತ್ಮಕ ಪರೀಕ್ಷೆ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಿ 2
ಇಂದು ಸಶಸ್ತ್ರಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಧ್ವಜ ಬಿಡುಗಡೆ ಸಮಾರಂಭ 3
ರೈತರಿಗೆ ಅನ್ಯಾಯ ಆಗಲು ಬಿಡುವುದಿಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ನಾಳೆ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎ□□ಜೆವೈ ಮತ್ತು ಕೃಷಿ 11 ಕೆವಿ ಮಾರ್ಗಗಳಲ್ಲಿ ಇದೇ ಡಿಸೆಂಬರ್ 16ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.ವಿದ್ಯುತ್ ಆಡಚಣೆಯಾಗುವ ಪ್ರದೇಶಗಳು: ಕಾಪರ್ ಮೇನ್ಸ್, ಕ್ಯಾದಿಗೆರೆ, ಜೆಎನ್ ಕೋಟೆ, ಕಾಸವರಹಟ್ಟಿ, ಪಲ್ಲವಗೆರೆ, ಇಂಡಸ್ಟ್ರಿಯಲ್ ಏರಿಯ, ಕೋಟೆ, ಜಿಲ್ಲಾ ಪಂಚಾಯತ್, ಸಜ್ಜನಕೆರೆ, ದಂಡಿನಕುರುಬರಹಟ್ಟಿ, ಕೆನ್ನೆಡಲು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಚಿತ್ರದುರ್ಗ ವಾಣಿಜ್ಯ, ಕಾರ್ಯ ಮತ್ತು ಪಾಲನ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದಿಶಾ ಸಮಿತಿ ಸಭೆ ಮುಂದೂಡಿಕೆ

» ಚಿತ್ರದುರ್ಗ

ಜಿಲ್ಲಾ ಪಂಚಾಯತ್ ಮುಖ್ಯ ಸಭಾಂಗಣದಲ್ಲಿ ಡಿಸೆಂಬರ್ 15ರಂದು ಬೆಳಿಗ್ಗೆ 11ಕ್ಕೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನಡೆಬೇಕಿದ್ದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ. ಮುಂದಿನ ಸಭೆಯ ದಿನಾಂಕವನ್ನು ತಿಳಿಸಲಾಗುವುದು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.

### 16, 17 ರಂದು ಪಾರದರ್ಶಕ ಪರೀಕ್ಷೆ ನಡೆಸಲು ಸೂಚನೆ

» ದಾವಣಗೆರೆ

ಕರ್ನಾಟಕ ಲೋಕಸೇವಾ ಆಯೋಗದಿಂದ ಡಿಸೆಂಬರ್ 16 ಮತ್ತು 17 ರಂದು ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಗ್ರೂಪ್ ಸಿ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಈ ವೇಳೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಅವ್ಯವಹಾರ ನಡೆಯದಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳುವ ಮೂಲಕ ಸುಗಮವಾಗಿ ಪರೀಕ್ಷೆಗಳನ್ನು ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಸೂಚಿಸಿದರು.ಗುರುವಾರ ಜಿಲ್ಲಾಡಳಿತ ಭವನದ ಅಪರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಡಿ.16 ರಂದು ನಗರದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಒಟ್ಟು 27 ಅಭ್ಯರ್ಥಿಗಳು ಮತ್ತು ಡಿ.17 ರಂದು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಮತ್ತು ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಒಟ್ಟು 1680 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯಲ್ಲಿ ಭಾಗವಹಿಸಲಿರುವ ಎಲ್ಲಾ ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನುಕಡ್ಡಾಯವಾಗಿನಿಷೇಧಿಸಿದೆ. ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ 200ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಮತ್ತು ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚುವಂತೆ ಹಾಗೂ ಕೇಂದ್ರದ ಸುತ್ತಮುತ್ತಲ ಪ್ರದೇಶದಲ್ಲಿ ಈಗಾಗಲೇ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದರು. ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಲಾದ ಅಧಿಕಾರಿಗಳು, ಮೇಲ್ವಿಚಾರಕರು ಪರೀಕ್ಷಾ ಕೇಂದ್ರಗಳಲ್ಲಿ ಒಂದು ಗಂಟೆ ಮುಂಚಿತವಾಗಿ ಹಾಜರಿರಬೇಕು. ಪ್ರಶ್ನೆಪತ್ರಿಕೆ ಮತ್ತು ಓಎಂಆರ್ ಶೀಟ್‌ಗಳನ್ನು ಸರಿಯಾದ ಸಮಯಕ್ಕೆ ಪರೀಕ್ಷಾರ್ಥಿಗಳಿಗೆ ವಿತರಿಸಬೇಕು. ಯಾವುದೇ ಕಾರಣಕ್ಕೂ ಪರೀಕ್ಷಾ ಸಮಯದಲ್ಲಿ ಮೇಲ್ವಿಚಾರಕರು ಮೊಬೈಲ್ ಬಳಸಬಾರದು ಎಂದು ತಿಳಿಸಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್.ಜಿ, ಉಪಸ್ಥಿತರಿದ್ದರು

### ವಿಧಾನ ಸಭೆಯಲ್ಲಿ ಶಾಸಕ ಟಿ.ರಘುಮೂರ್ತಿ ಹೇಳಿಕೆ

# ಶೇಂಗಾಗೆ ವಿಶೇಷ ಪ್ಯಾಕೇಜ್ ಘೋಷಿಸಿ

## ಭದ್ರಾ ಮೇಲ್ದಂಡೆ ಯೋಜನೆ: ಕಡೆಯ ಭಾಗದ ತಾಲ್ಲೂಕುಗಳಿಗೆ ಅನ್ಯಾಯವಾಗದಿರಲಿ

» ಬೆಳಗಾವಿ ಸುವರ್ಣಸೌಧ

ಭದ್ರಾ ಮೇಲ್ದಂಡೆ ಯೋಜನೆ ಘೋಷಣೆಯಾಗಿ 20 ವರ್ಷವಾಗುತ್ತಾ ಬಂದಿದೆ. ಇದರ ನಡುವೆ ಯೋಜನೆಯ ಮೇಲ್ಭಾಗದ ಪ್ರದೇಶದಲ್ಲಿ ಪರಿಷ್ಕೃತ ಯೋಜನೆಗಳನ್ನು ಸೇರಿಸಿ, ಕೆರೆಗಳಿಗೆ ನೀರು ತುಂಬಿಸುವ ಹಾಗೂ ನೀರಾವರಿ ಯೋಜನೆಗಳನ್ನು ವಿಸ್ತರಿಸುತ್ತಿದ್ದಾರೆ. ಇದರಿಂದಾಗಿ ಕಡೆಯ ಭಾಗದ ತಾಲ್ಲೂಕುಗಳಿಗೆ ಅನ್ಯಾಯವಾಗುತ್ತದೆ ಎಂದು ಶಾಸಕ ಟಿ.ರಘುಮೂರ್ತಿ ಕಳವಳ ವ್ಯಕ್ತಪಡಿಸಿದರು.

ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಗುರುವಾರ ವಿಧಾನ ಸಭೆಯ ಚರ್ಚೆಯ ವೇಳೆ ಅವರು ಮಾತನಾಡಿದರು.

ರಾಜ್ಯಸರ್ಕಾರಹಾಗೂಜಲಸಂಪನ್ಮೂಲ ಸಚಿವರು ಈ ಯೋಜನೆಗಳಿಗೆ ಮಿತಿ ನಿಗದಿ ಮಾಡಿ, ಶತ ಶತಮಾನಗಳಿಂದ ವಂಚಿತವಾಗಿರುವ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಿಗೆ ನ್ಯಾಯ ಒದಗಿಸಬೇಕು. ಆರಂಭದಲ್ಲಿ ರೂ.2,500 ಕೋಟಿ ಇದ್ದ ಭದ್ರಾ ಮೇಲ್ದಂಡೆ ಯೋಜನೆ ವೆಚ್ಚ ಇಂದು ರೂ.21,000 ಕೋಟಿಗೆ ಏರಿಕೆಯಾಗಿದೆ. ಇದುವರೆಗೂ ರೂ.7,500 ಕೋಟಿ ವೆಚ್ಚವಾಗಿದೆ. ಆದರೂ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಿಗೆ ಯೋಜನೆ ಲಾಭವಾಗಿಲ್ಲ. ಭದ್ರಾ ಮೇಲ್ದಂಡೆ ಯೋಜನೆಯ ಆಧರಿಸಿ ಕ್ಷೇತ್ರದ 2,25,151 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಉದ್ದೇಶಿಸಲಾಗಿದೆ. ಇದೇ ಯೋಜನೆಯಲ್ಲಿ ಕ್ಷೇತ್ರದ 367 ಕೆರೆಗಳಿಗೆ ನೀರು ತುಂಬಿಸಲಾಗುವುದು.



ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಭದ್ರಾ ಮೆಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಘೋಷಿಸಿ ರೂ.5300 ಕೋಟಿ ಅನುದಾನ ಮೀಸಲು ಇರಿಸಿದೆ. ಇದುವರೆಗೂ ಈ ಅನುದಾನ ಹಣ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾಗಿಲ್ಲ. ಕೇಂದ್ರ ಅನುದಾನ ದೊರಕಿದರೆ ಯೋಜನೆ ಕಾಮಗಾರಿಗೆ ವೇಗ ದೊರಯಲಿದೆ ಎಂದು ಅಭಿಪ್ರಾಯಪಟ್ಟರು.

**ರೂ. 50 ಕೋಟಿ ವಿಶೇಷ ಅನುದಾನಕ್ಕೆ ಬೇಡಿಕೆ:** 2019–20ರ ಆಯವ್ಯಯದಲ್ಲಿ ರಾಜ್ಯ ಸರ್ಕಾರ ಚಳ್ಳಕೆರೆ, ಮೊಳಕಾಲ್ಮೂರು, ಶಿರಾ, ಪಾವಗಡ ಹಾಗೂ ಮಧುಗಿರಿ ತಾಲ್ಲೂಕುಗಳ ಅಭಿವೃದ್ಧಿ ರೂ.50 ಕೋಟಿ ವಿಶೇಷ ಅನುದಾನ ನೀಡಿತ್ತು.

ಪುಟ 3

### ಪರಶುರಾಂಪುರ ತಾಲೂಕು ಕೇಂದ್ರವಾಗಿಸಲು ಮನವಿ

ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅವರು ಚುನಾವಣೆ ಸಂದರ್ಭದಲ್ಲಿ ಕೊಟ್ಟ ಮಾತಿನಂತೆ ಪರಶುರಾಂಪುರವನ್ನು ತಾಲೂಕು ಕೇಂದ್ರ ಮಾಡಲು ವಿಧಾನಸಭೆ ಅಧಿವೇಶದಲ್ಲಿ ಮಾತನಾಡಿ ಮುಖ್ಯಮಂತ್ರಿ ಅವರಿಗೆ ಒತ್ತಡ ಏರಿದ್ದು ಪರಶುರಾಂಪುರ ತಾಲೂಕು ಕೇಂದ್ರದ ಕನಸು ಚಿಗುರೊಡೆದಿದೆ.

### ನಮ್ಮ ರೈತರಿಗೆ ಅನ್ಯಾಯವಾಗದಿರಲಿ

ಚಳಿಗಾಲದ ಅಧಿವೇಶನದಲ್ಲಿ ಶಾಸಕ ಟಿ.ರಘುಮೂರ್ತಿ ಮಾತನಾಡಿ ಕಳೆದ 20 ವರ್ಷದಲ್ಲಿ ಭದ್ರಾ ಮೇಲ್ದಂಡೆ ಯೋಜನೆ ನಡೆಯುತ್ತಿದ್ದು ಪ್ರತಿ ವರ್ಷ ವ್ಯಾಪ್ತಿ ವಿಸ್ತರಿಸುತ್ತಿದ್ದು ಕೊನೆಯ ಭಾಗದ ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಿ ಎಂದು ಉಪ ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರಾದ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಮಾಡಿದರು.

- 29.9. ಣಟಿಛಿ ನೀರಿನಲ್ಲಿ ವ್ಯತ್ಯಾಸವಾಗದೇ ನಮ್ಮ ರೈತರಿಗೆ ಅನ್ಯಾಯವಾದಂತೆ ಕೆರೆಗಆಗೆ ನೀರುಣಿಸುವ ಕೆಲಸ ಆಗಬೇಕು.
- ಚಳ್ಳಕೆರೆ ನಗರಸಭೆ ಆಗಿದ್ದು ನಗರಕ್ಕೆ ಯುಜಿಡಿ ಕಾಮಗಾರಿಗೆ ಅನುದಾನ ನೀಡಬೇಕು.
- ಕಳೆದ ಅಧಿವೇಶನಲ್ಲಿ ನನ್ನ ಮನವಿಯಂತೆ ಪರಶುರಾಂಪುರ ತಾಲೂಕು ಕೇಂದ್ರವಾಗಿ ಘೋಷಣೆ ಮಾಡಬೇಕು.
- ಅಲೆಮಾರಿ ಮತ್ತು ಅರೆಅಲೆಮಾರಿ ಮನೆಗಳ ನಿರ್ಮಾಣಕ್ಕೆ 1.25 ಲಕ್ಷ ಕಡಿಮೆ ಆಗಿದ್ದು ಮೊತ್ತ ಹೆಚ್ಚಳ ಮಾಡಬೇಕು.
- 50 ಕೋಟಿ ವಿಶೇಷ ಅನುದಾನ ಪ್ಯಾಕೇಜ್ ಬಿಡುಗಡೆಗೊಆಸಬೇಕು.
- ಶೇಂಗಾ ಬೆಳೆಗೆ ವಿಶೇಷ ಪ್ಯಾಕೇಜ್ ಘೋಷಿಸಲು ಮನವಿ.
- ಭದ್ರಾಗೆ ಕೇಂದ್ರ ಸರ್ಕಾರ 5300 ಕೋಟಿಯ ಮೀಸಲಿನ ಹಣ ಬಿಡುಗಡೆಗೆ ಒತ್ತಾಯ

# ರೈತರ ರಾಷ್ಟ್ರೀಕೃತ ಬ್ಯಾಂಕ್ ಸಾಲ ಮನ್ನಾ ಮಾಡಿ

» ಚಿತ್ರದುರ್ಗ

ಸಕಾಲಕ್ಕೆ ಮಳೆಯಿಲ್ಲದೆ ರೈತರು ಸಂಕಷ್ಟದಲ್ಲಿರುವುದರಿಂದ ಎಲ್ಲಾ ಸಹಕಾರ ಹಾಗೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿರುವ ರೈತರ ಸಾಲ ಮನ್ನಾ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.ಮೆಕ್ಕೆಜೋಳ, ಈರುಳ್ಳಿ, ರಾಗಿ, ಹತ್ತಿ ಹಾಗೂ ದ್ವಿದಳ ಧಾನ್ಯಗಳು ನಾಶವಾಗಿರುವುದರಿಂದ ಎಲ್ಲಾ ಬೆಳೆಗಳಿಗೆ ಎಕರೆಗೆ ಇಪ್ಪತ್ತೈದು ಸಾವಿರ ರೂ.ಗಳ ಪರಿಹಾರ ನೀಡಬೇಕು.

ರೈತರ ಪಂಪ್‌ಸೆಟ್‌ನ ಟಿಸಿ.ಗಳು ಸುಟ್ಟರೆ ಮೊದಲು ಸರ್ಕಾರ ಉಚಿತವಾಗಿ ಕೊಡುತ್ತಿತ್ತು. ಈಗಿನ ಸರ್ಕಾರ ಟಿಸಿ.ಗಳು ಸುಟ್ಟರೆ ರೈತರೆ ರಿಪೇರಿ ಮಾಡಿಸಿಕೊಳ್ಳುವಂತೆ ಆದೇಶಿಸಿದೆ. ಈ ಕ್ರಮವನ್ನು ಹಿಂದಕ್ಕೆ ಪಡೆಯಬೇಕು.

ಎಲ್ಲಾ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಿ ನಿರುದ್ಯೋಗ ಸಮಸ್ಯೆ ಬಗೆಹರಿಸಬೇಕು. ಪ್ರತಿ ಗ್ರಾಮಗಳಿಗೆ ಕೆ.ಎಸ್.ಆರ್.ಟಿ.ಸಿ. ಬಸ್ ಸಂಚಾರ ಆರಂಭಿಸಬೇಕು. ಬಸ್‌ನಲ್ಲಿ ಓಡಾಡುವ ಎಲ್ಲಾ ಮಕ್ಕಳಿಗೆ ಉಚಿತ ಬಸ್ ಪಾಸ್ ವಿತರಿಸಬೇಕು.

ಸ್ಪಿಂಕ್ಲರ್ ಸೆಟ್‌ಗಳಿಗೆ ನಾಲ್ಕು ಸಾವಿರ ರೂ. ನಿಗಧಿಪಡಿಸಿ ರೈತರಿಗೆ ಗಾಯದ ಮೇಲೆ ಬರೆ ಎಳೆಯುತ್ತಿರುವ ಸರ್ಕಾರ ತನ್ನ ನಿರ್ಧಾರ ಕೈಬಿಟ್ಟು ರೈತರ ನೆರವಿಗೆ ಧಾವಿಸಬೇಕು ಎಂದು ಅಖಂಡ ಕರ್ನಾಟಕ ರೈತ ಸಂಘದವರು ಅಪರ ಜಿಲ್ಲಾಧಿಕಾರಿಯವರಲ್ಲಿ ವಿನಂತಿಸಿದರು.

ಅಖಂಡ ಕರ್ನಾಟಕ ರೈತ ಸಂಘದ ಅಧ್ಯಕ್ಷ ಎಲ್.ಬಸವರಾಜಪ್ಪ, ಎಸ್.ಎಂ.ಶಿವಕುಮಾರ್, ಎಂ.ಸಿದ್ದಪ್ಪ, ಜಿ.ಪರಮೇಶ್ವರಪ್ಪ, ಗೌಡ್ರು ಪರಮಶಿವಣ್ಣ, ನಿರಂಜನಮೂರ್ತಿ, ವೀರಣ್ಣ, ಆರ್.ಶಾಂತಕುಮಾರ್, ಗಿರೀಶ್‌ರೆಡ್ಡಿ, ಎ.ಎಸ್.ಗುರುಸಿದ್ದಪ್ಪ, ಕುಬೇರಮ್ಮ, ಕುರುಬರಹಳ್ಳಿ ಶಿವಣ್ಣ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಸಹಕಾರ ಹಾಗೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿರುವ ರೈತರ ಸಾಲ ಮನ್ನಾ ಮಾಡುವಂತೆ ಅಖಂಡ ಕರ್ನಾಟಕ ರೈತ ಸಂಘದಿಂದ ಅಪರ ಜಿಲ್ಲಾಧಿಕಾರಿಗೆ ಮನವಿ.

## ಪ್ರಮುಖ ಸುದ್ದಿ

# ಕರ್ನಾಟಕ ಅತಿಹೆಚ್ಚು ಸಿರಿಧಾನ್ಯ ಬೆಳೆವ ರಾಜ್ಯವಾಗಬೇಕು

» ಬೆಳಗಾವಿ

ಸಿರಿಧಾನ್ಯ ಬೆಳೆಯಲ್ಲಿ ಕರ್ನಾಟಕ, ದೇಶದಲ್ಲಿ 4ನೇ ಸ್ಥಾನದಲ್ಲಿದೆ. ಕರ್ನಾಟಕ ದೇಶದಲ್ಲಿಯೇ ಅತಿಹೆಚ್ಚು ಸಿರಿಧಾನ್ಯ ಬೆಳೆಯುವ ರಾಜ್ಯವಾಗಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಕೃಷಿ ಇಲಾಖೆ ವತಿಯಿಂದ ಆಯೋಜಿಸಿದ್ದ ಸಿರಿಧಾನ್ಯ ಮತ್ತು ಸಾವಯವ ಅಂತರ ರಾಷ್ಟ್ರೀಯ ದಿನ 2023 ಮತ್ತು ಮೇಳದ ಪೂರ್ವಭಾವಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಿರಿಧಾನ್ಯಗಳ ಬಳಕೆಯ ಲಾಭಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಂತಹ ಮೇಳಗಳು ಸಹಕಾರಿಯಾಗಿವೆ. ಸಾವಯವ ಕೃಷಿಯತ್ತ ಜನರು ಮುಖ ಮಾಡಿದ್ದು, ಸಾವಯವ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಿದೆ. ಇಂದು ವಿಶ್ವದಲ್ಲಿ ಸಿರಿಧಾನ್ಯವನ್ನು ಆಚರಿಸಲಾಗುತ್ತಿದೆ. ಜನರಲ್ಲಿ ಹಾಗೂ ರೈತರಲ್ಲಿ ಸಿರಿಧಾನ್ಯಗಳ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಇವುಗಳಿಗೆ ಮಾರುಕಟ್ಟೆ ಒದಗಿಸಬೇಕು. ಕಳೆದ 20 ವರ್ಷಗಳಿಂದ ಸಾವಯವ ಕೃಷಿ ಪದ್ಧತಿಗೆ ಒತ್ತು ನೀಡಲಾಗುತ್ತಿದೆ. ಅದಕ್ಕೆ ಕೃಷಿ ಇಲಾಖೆಯವರು ಪೂರಕ ಕ್ರಮಗಳನ್ನು ತೆಗೆದುಕೊಳ್ಳಲು ತಿಳಿಸಲಾಗಿದೆ ಎಂದರು.





**ಬೆಂಗಳೂರಿನಲ್ಲಿ ಜನವರಿ 5,6,7 ಸಿರಿಧಾನ್ಯ ಮೇಳ::** ಸಾವಯವ ಕೃಷಿ ಪದ್ಧತಿ, ಸಿರಿಧಾನ್ಯಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಬೆಂಗಳೂರಿನಲ್ಲಿ ಜನವರಿ 5, 6, 7 ರಂದು ಸಿರಿಧಾನ್ಯ ಮೇಳವನ್ನು ಏರ್ಪಡಿಸಲಾಗಿದೆ ಎಂದರು.

**ಸಿರಿಧಾನ್ಯ ಆರೋಗ್ಯಕ್ಕೆ ಒಳ್ಳೆಯದು::** ಮೊದಲನೇ ಮೇಳ ನಡೆದಿದ್ದು 2017 ರಲ್ಲಿ. ಆಗ ಕೃಷ್ಣ ಬೈರೇಗೌಡರು ಕೃಷಿ ಸಚಿವರಾಗಿದ್ದರು. 5 ವರ್ಷ ಸತತವಾಗಿ ಏರ್ಪಾಡು ಮಾಡಲಾಗಿತ್ತು. ಕೋವಿಡ್ ಸಂದರ್ಭದಲ್ಲಿ ಮಾಡಲಾಗಿರಲಿಲ್ಲ. ಸಿರಿಧಾನ್ಯ ಬಹಳ ಬೇಡಿಕೆಯಲ್ಲಿರುವ ವಸ್ತು. ಮೊದಲು ರಾಗಿ, ಜೋಳ, ನವಣೆ, ಸಾಮೆ, ಆರ್ಕವನ್ನು ಬೆಳೆಯುತ್ತಿದ್ದೆವು . ನಂತರ ಕಡಿಮೆಯಾಗುತ್ತಾ ಬಂದಿತು. ಮಳೆ ಕಡಿಮೆಯಾಗುವ ಪ್ರದೇಶಗಳಲ್ಲಿ ಸಿರಿಧಾನ್ಯಗಳನ್ನು ಬೆಳೆಯಲಾಗುತ್ತದೆ. ಇತ್ತೀಚೆಗೆ ಸಿರಿಧಾನ್ಯಗಳು ಆರೋಗ್ಯಕ್ಕೆ ಒಳ್ಳೆಯದೆಂದು ಅರಿತಿರುವ ಜನ ಹೆಚ್ಚೆಚ್ಚು ಬಳಕೆ ಮಾಡುತ್ತಿದ್ದಾರೆ. ಇದರಲ್ಲಿ ಕಾರ್ಬೋಹೈಡ್ರೇಟ್ಸ್ ಕಡಿಮೆಯಿದ್ದು, ಲವಣಾಂಶ ಮತ್ತು ನಾರಿನಂಶ ಹೇರಳವಾಗಿದ್ದು, ಆರೋಗ್ಯಕ್ಕೆ ಉತ್ತಮವಾಗಿದೆ ಎಂದರು.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷರ ಯು.ಟಿ.ಖಾದರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೃಷಿ ಸಚಿವ ಚೆಲುವರಾಯಸ್ವಾಮಿ, ವಿಧಾನಪರಿಷತ್ ಉಪಸಭಾಪತಿ ಪ್ರಾಣೇಶ್, ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಾ.ಎನ್.ಪರಶುರಾಮಪ್ಪಗೆ 'ಗೌರವ ಡಾಕ್ಟರೇಟ್'



» ದಾವಣಗೆರೆ

ನಗರದ ಯೋಗಗುರು ಡಾ.ಎನ್.ಪರಶುರಾಮಪ್ಪ ಅವರಿಗೆ ಯೋಗ-ಸಂಸ್ಕೃತಮ್ ವಿಶ್ವವಿದ್ಯಾಲಯ (ಫ್ಲೋರಿಡಾ, ಯುಎಸ್ಎ)ದಿಂದ 'ಗೌರವ ಡಾಕ್ಟರೇಟ್' ನೀಡಿ ಗೌರವಿಸಿದೆ. ತಮಿಳುನಾಡಿನ ತಿರುವಣ್ಣಾ ಮಲೈನಲ್ಲಿರುವ ಎಸ್‌ಕೆಪಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕಳೆದ ಡಿ.3ರಂದು ನಡೆದ ಅಮೆರಿಕದ ಯೋಗ-ಸಂಸ್ಕೃತಮ್ ವಿಶ್ವವಿದ್ಯಾಲಯದ 15ನೇ ಘಟಿಕೋತ್ಸವದಲ್ಲಿ ಪಾಂಡಿಚೇರಿ ಸರ್ಕಾರದ ಉಪಮುಖ್ಯಮಂತ್ರಿ ವಿ.ನಾರಾಯಣಸ್ವಾಮಿ, ಕೇಂದ್ರ ಸರ್ಕಾರದ ಡಾ.ಕಶ್ಯಪ್ ಸಮ್ಮುಖದಲ್ಲಿ ವಿವಿಯ ಕುಲಪತಿ ಡಾ.ಬಿ.ವಿ.ಕೆ.ಶಾಸ್ತ್ರಿ 'ಗೌರವ ಡಾಕ್ಟರೇಟ್' ಪ್ರದಾನ ಮಾಡಿದ್ದಾರೆ.ಈ ಸಂದರ್ಭದಲ್ಲಿ ಎಸ್ ಜಿ ಎಸ್ ಸ್ಥಾಪಕ ಅಧ್ಯಕ್ಷರಾದ ಡಾ. ಎಮ್ ನಿರಂಜನ ಮೂರ್ತಿ ಅವರೊಂದಿಗೆ ವಿಶ್ವವಿದ್ಯಾಲಯದ ಎಲ್ಲಾ ಆಡಳಿತ ವರ್ಗದವರು ಭಾಗವಹಿಸಿದ್ದರು.ಈ ಘಟಿಕೋತ್ಸವದಲ್ಲಿ ಯೋಗ ಕ್ಷೇತ್ರದಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವುಲ್ಲದೆ ಅಂತರಾಷ್ಟ್ರೀಯ ಯೋಗ ಸ್ಪರ್ಧೆಗಳಲ್ಲಿ ನಿರ್ಣಾಯಕ ರಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಹಲವಾರು ವಿದ್ಯಾ ಸಂಸ್ಥೆಗಳಲ್ಲಿ ಯೋಗ ತರಬೇತಿಯನ್ನು ನೀಡುತ್ತಿರುವ ಡಾ.ಎನ್.ಪರಶುರಾಮಪ್ಪ ಅವರಿಗೆಅಮೆರಿಕದ ಯೋಗ-ಸಂಸ್ಕೃತಮ್ ವಿಶ್ವವಿದ್ಯಾಲಯ ಈ ಪ್ರಶಸ್ತಿ ನೀಡಿ ಗೌರವಿಸಿದೆ. ಈ ಪ್ರಶಸ್ತಿಗೆ ಭಾಜನರಾದ ಡಾ.ಎನ್.ಪರಶುರಾಮಪ್ಪ ಅವರಿಗೆ ದಾವಣಗೆರೆ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ವಾಸುದೇವ್ ರಾಯ್ಕರ್, ದಾವಣಗೆರೆ ಎಎಸ್‌ಎಸ್ ಯೋಗ ಫೆಡರೇಷನ್ ಅಧ್ಯಕ್ಷ ರುದ್ರಪ್ಪ, ಉಪಾಧ್ಯಕ್ಷ ಗೋಪಾಲ್ ರಾವ್, ಖಜಾಂಚಿ ಎಸ್. ರಾಜಶೇಖರ್, ನಿರ್ದೇಶಕರಾದ ಜೆ.ಎಸ್.ವೀರೇಶ್, ಎ.ಎನ್.ನಿಂಗಪ್ಪ, ಎಂ.ವೈ.ಸತೀಶ್, ಅಜ್ಜಯ, ರಾಘವೇಂದ್ರ ಚೌಹಣ್, ರಂಗಪ್ಪ, ನಾಗರಾಜ್, ಸಾವಿತ್ರಮ್ಮ ಹಾಗೂ ಯೋಗ ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ಇಂದು ಕಾನೂನು ಅರಿವು, ಇ-ಶ್ರಮ ಕಾರ್ಡು ವಿತರಣೆ

» ದಾವಣಗೆರೆ

ಕಾರ್ಮಿಕ ಇಲಾಖೆ, ದಾವಣಗೆರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕಾಮಿಕರ ಸಂಘ, ದಾವಣಗೆರೆ, ಎಐಟಿಯುಸಿ ಇವರ ಸಹಯೋಗದಲ್ಲಿ ಡಿ.15ರ ಬೆಳಿಗ್ಗೆ 9ಕ್ಕೆ ಆವರಗೆರೆಯ ಪಿ.ಬಸವನಗೌಡ ಬಡಾವಣೆಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕಾನೂನು ಅರಿವು ಕಾರ್ಯಕ್ರಮ ಹ ಆಗೂ ಅಸಂಘಟಿತ ಕಾರ್ಮಿಕರಿಗೆ ಇ-ಶ್ರಮ ಕಾರ್ಡ್ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ನೆರವೇರಿಸುವರು. ಸಹಾಯಕ ಕಾರ್ಮಿಕ ಆಯುಕ್ತೆ ಎಸ್.ಆರ್.ವೀಣಾ ಅಧ್ಯಕ್ಷತೆ ವಹಿಸುವರು. ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕಾಮಿಕರ ಸಂಘದ ರಾಜಾಧ್ಯಕ್ಷ ಹೆಚ್.ಜಿ.ಉಮೇಶ್ ಆವರಗೆರೆ ಪ್ರಾಸ್ತಾವಿಕವಾಗಿ ಮಾತನಾಡುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ, ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂಸಾಬ್, ಪಾಲಿಕೆ ಸದಸ್ಯೆ ಜಯ್ಯಮ್ಮ ಗೋಪಿನಾಥ್, ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷವಿ.ಲಕ್ಷ್ಮಣ್,ವಕೀಲರಸಂಘದಉಪಾಧ್ಯಕ್ಷ ಜಿ.ಕೆ.ಬಸವರಾಜ್, ಸಹಕಾರ್ಯದರ್ಶಿ ಎ.ಎಸ್. ಮಂಜುನಾಥ್, ವಕೀಲರಾದ ಎಸ್.ಪರಮೇಶ್, ಹೆಚ್.ಗುರುಮೂತಿ,ಪಾಮೇನಹಳ್ಳಿ ಮಂಜುನಾಥ್, ಪರಶುರಾಮ್, ಅಂಜಿನಪ್ಪ, ಹನುಮಂತಪ್ಪ, ಡಿ.ಎಸ್.ವಿಜಯಕುಮಾರ್, ಬಿ.ಅಜ್ಜಯ್ಯ ಆಗಮಿಸಲಿದ್ದಾರೆ.

### ಸಮಾಜ ಕಲ್ಯಾಣ ಸಚಿವರ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ರಾಜ್ಯ ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರು ಡಿ. 16 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಚಿತ್ರದುರ್ಗ ನಗರಕ್ಕೆ ಬೆ. 11 ಗಂಟೆಗೆ ಆಗಮಿಸುವರು. ಬಳಿಕ ಚಿತ್ರದುರ್ಗದಲ್ಲಿ ಪಕ್ಷದ ವತಿಯಿಂದ ಏರ್ಪಡಿಸಿರುವ ಲೋಕಸಭಾ ಅಭ್ಯರ್ಥಿ ಆಯ್ಕೆ ಕುರಿತಂತೆ ಸಮಾಲೋಚನಾ ಸಭೆಯಲ್ಲಿ ಭಾಗವಹಿಸುವರು.

---

ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ

# ಡಿ.16, 17ರಂದು ಗ್ರೂಪ್-ಸಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಿ

» ಚಿತ್ರದುರ್ಗ

ಇದೇ ಡಿಸೆಂಬರ್ 16 ಮತ್ತು 17ರಂದು ಗ್ರೂಪ್-ಸಿ ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ವತಿಯಿಂದ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕಾರ್ಯವನ್ನು ಬಹಳ ಎಚ್ಚರಿಕೆಯಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಜಿಲ್ಲಾಧಿಕಾರಿಗಳಕಚೇರಿ ಸಭಾಂಗಣದಲ್ಲಿ ಗುರುವಾರ ಕೆಪಿಎಸ್‌ಸಿ ಗ್ರೂಪ್-ಸಿ ಸ್ಪರ್ಧಾತ್ಮಕ ಪರೀಕ್ಷೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊಬೈಲ್, ಬ್ಲೂಟೂತ್ ಮತ್ತು ಆಧುನಿಕ ಸಂವಹನದ ಉಪಕರಣ ಬಳಸಿ ಪರೀಕ್ಷಾ ಅಕ್ರಮ ಮಾಡುವುದನ್ನು ತಡೆಯಲು ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್ ಹಾಗೂ ಪರೀಕ್ಷಾ ಕೇಂದ್ರದ ಎಲ್ಲಾ ಕೊಠಡಿಗಳಲ್ಲಿ ಸಿ.ಸಿ.ಟಿ.ವಿ ಅಳವಡಿಸಲಾಗುವುದು. ಪರೀಕ್ಷಾ ಸಂಬಂಧ ಕೆಪಿಎಸ್‌ಸಿ ನೀಡಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲನೆ ಮಾಡಬೇಕು ಎಂದು ತಾಕೀತು ಮಾಡಿದರು.

ಗ್ರೂಪ್-ಸಿ ಹುದ್ದೆಗಳ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆಯು ಡಿಸೆಂಬರ್



16ರಂದು ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ಕನ್ನಡ ಭಾಷಾ ಪರೀಕ್ಷೆಯು ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಡೆಯಲಿದ್ದು, 8 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಡಿಸೆಂಬರ್ 17ರಂದು ಬೆಳಿಗ್ಗೆ 10 ರಿಂದ 11.30 ರವರೆಗೆ ಸಾಮಾನ್ಯ ಜ್ಞಾನದ ಪರೀಕ್ಷೆಯು ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಡೆಯಲಿದ್ದು, 744 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇದೇ ದಿನ ಮಧ್ಯಾಹ್ನ 2 ರಿಂದ ಸಂಜೆ 4 ರವರೆಗೆ ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲಿಷ್, ಕಂಪ್ಯೂಟರ್ ಜ್ಞಾನ ವಿಷಯಗಳ ಪರೀಕ್ಷೆಯು ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಡೆಯಲಿದ್ದು, 481 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು, ಗ್ರೂಪ್-ಸಿ ಹುದ್ದೆಗಳಿಗೆ ಒಟ್ಟು 1225 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಪರೀಕ್ಷಾ ಕೇಂದ್ರದ ಸುತ್ತ ಪೊಲೀಸ್ ಬಂದೋಬಸ್ತ್‌ವ್ಯವಸ್ಥೆ ಮಾಡಬೇಕು. ಇದಕ್ಕೆ ಪೂರಕವಾಗಿ ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಗೊಳಿಸಲಾಗುವುದು. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ತೆರಳುವ ಮುಂಚೆ ಸೂಕ್ತವಾಗಿ ತಪಾಸಣೆ ನಡೆಸಬೇಕು. ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕು ಪ್ರಶ್ನೆಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದರು.

ಪರೀಕ್ಷಾ ಕಾರ್ಯ ಮುಗಿದ ನಂತರ ಬೆಳಗಿನ ಅವಧಿ ಉತ್ತರ ಪತ್ರಿಕೆಗಳನ್ನು ಮತ್ತು ಮಧ್ಯಾಹ್ನ ಅವಧಿಯ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಅಧಿವೇಶನವಾರು ಆಯಾ ಅಧೀವೇಶನದ ಪರೀಕ್ಷೆ ಮುಗಿದ ನಂತರ ಅಂಚೆ ಕಚೇರಿಯ ಮೂಲಕ ಆಯೋಗಕ್ಕೆ ಸುರಕ್ಷಿತವಾಗಿ ತಲುಪಿಸಬೇಕು ಎಂದು ಅಂಚೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಪರೀಕ್ಷಾ ಕೇಂದ್ರದಲ್ಲಿ ಹೆಲ್ತ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸಿ, ಆರೋಗ್ಯ ತಪಾಸಣೆಗಾಗಿ ಆರೋಗ್ಯ ಸಹಾಯಕರನ್ನು ನಿಯೋಜಿಸಬೇಕು. ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಜಾಮರ್, ಸಿ.ಸಿ.ಟಿ.ವಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆಯೇಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಪರೀಕ್ಷಾ ನೋಡಲ್ ಅಧಿಕಾರಿ ಎನ್.ಆರ್.ತಿಪ್ಪೇಸ್ವಾಮಿ, ಪೊಲೀಸ್ ಇಲಾಖೆಯ ಗುಡ್ಡಪ್ಪ, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ವೆಂಕಟೇಶ್, ನಾಗಭೂಷಣ್ ಸೇರಿದಂತೆ ಜಿಲ್ಲಾ ಖಜನಾಧಿಕಾರಿಗಳು, ಅಂಚೆ ಇಲಾಖೆ ಅಧಿಕಾರಿಗಳು ಇದ್ದರು.

---

## ವಿಶ್ವನಾಥೇಶ್ವರ ದೇವಸ್ಥಾನದಲ್ಲಿ ಲಕ್ಷ ದೀಪೋತ್ಸವ





» ಪರಶುರಾಂಪುರ

ಗ್ರಾಮದ ಕೋರ್ಲಕುಂಟೆ ರಸ್ತೆಯಲ್ಲಿ ಬರುವ ವಿಶ್ವನಾಥೇಶ್ವರ ದೇವಸ್ಥಾನದಲ್ಲಿ ಮಂಗಳವಾರ ಜನಸ್ತೋಮದ ನಡುವೆ ಲಕ್ಷ ದೀಪೋತ್ಸವು ಭಕ್ತಿ ಸಂಭ್ರಮದಿಂದ ಜರುಗಿತು.

ದೇವಸ್ಥಾನದ ಆವರಣದಲ್ಲಿ ಸಾಲು ಸಾಲು ದೀಪಗಳ ಚಿತ್ತಾರ .. ಕಣ್ಣು ಆಯಿಸಿದ ಕಡೆಗಳಲ್ಲಿ ಬೆಳಕಿನಾಟ , ಮಿನುಗುವ ದೀಪಗಳ ಚಿತ್ತಾರದಿಂದ ಭಕ್ತರ ಜೊತೆ ಯುವಜನರು ಸೆಲ್ಫಿ.ಹಣತೆ ಹಚ್ಚಿ ಭಕ್ತಿ ಭಾವ ಮೆರೆದ ಭಕ್ತರು.ಕಾತಿ9ಕ ಮಾಸದ ಅಂಗವಾಗಿ ದೇವಸ್ಥಾನದಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿತ್ತು.

ದೀಪೋತ್ಸವ ಅಂಗವಾಗಿ ಬೆಳಿಗ್ಗೆಯಿಂದ ಸಂಜೆಯವರೆಗೆ ವಿಶ್ವನಾಥೇಶ್ವರ , ಆಂಜನೇಯ, ರಾಮಾಂಜನೇಯ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು.ದೇವರಿಗೆ ಬಗೆಯ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು.

ಶ್ರದ್ಧಾ ಭಕ್ತಿಯಿಂದ ಭಕ್ತರು ದೀಪು ಬೆಳಗುವುದರ ಮೂಲಕ ದೇವರಿಗೆ ಹೂವು , ಹಣ್ಣು , ಕಾಯಿ ಅಪಿ9ಸಿ ಹರಕೆ ತೀರಿಸುವುದ ಮೂಲಕ ದೇವರು ದರ್ಶನ ಪಡೆದು ಪ್ರಸಾದವನ್ನ ಸ್ವೀಕರಿಸಿದರು.

## ಜ್ಞಾನ ನೀಡುವ ಗ್ರಂಥಾಲಯ ಬಹಳ ಪವಿತ್ರವಾದದ್ದು: ಸಂಪತ್ ಕುಮಾರ್




» ಹೊಸದುರ್ಗ

ಗ್ರಂಥಾಲಯ ಎನ್ನುವ ಪದ ಗ್ರಂಥಿ ಎನ್ನುವುದರಿಂದ ಬಂದಿದ್ದು, ಇತ್ತೀಚೆಗೆ ಗ್ರಂಥಾಲಯಕ್ಕೆ ಓದುಗರು ಹೋಗುವುದಕ್ಕಿಂತ ಗ್ರಂಥಾಲಯವೇ ಓದುಗರ ಬಳಿ ಬಂದಿದೆ. ಗ್ರಂಥಾಲಯಗಳು ನೆಮ್ಮದಿಯ ಜೊತೆಗೆ ಜ್ಞಾನದ ಬೆಳಕನ್ನು ನೀಡುತ್ತವೆ. ಅಲ್ಲದೇ ಬಹಳ ಪವಿತ್ರವಾದ ಸ್ಥಳವಾಗಿದೆ ಎಂದು ಶ್ರೇಷ್ಠ ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನವನ್ನು ಪಡೆದಿರುವ ಡಾ.ಬಿ.ವಿ.ಸಂಪತ್ ಕುಮಾರ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿಶ್ವಮಾನ ಸಭಾಂಗಣದಲ್ಲಿ ಶನಿವಾರ ಗ್ರಂಥಾಲಯ ಮಾಹಿತಿ ಕೇಂದ್ರ ಮತ್ತು ಐಪಿಎಸಿ ವತಿಯಿಂದ ಆಯೋಜಿಸಿದ್ದ ಓದುಗರ ವೇದಿಕೆ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಮುಕ್ತ ಶೈಕ್ಷಣಿಕ ಸಂಪನ್ಮೂಲಗಳು ಯಾವುವು, ಅವುಗಳನ್ನು ಹೇಗೆ ಬೆಳೆಸಿಕೊಳ್ಳಬೇಕು, ಅದರ ಪ್ರಯೋಜನಗಳ ಬಗ್ಗೆ ವಿಶೇಷ ಉಪನ್ಯಾಸವನ್ನು ನೀಡಿದರು.

ಈ ವೇಳೆ ಕಾರ್ಯಕ್ರಮವನ್ನು ಕುರಿತು ನಿವೃತ್ತ ವಿಶ್ರಾಂತ ಪ್ರಾಧ್ಯಾಪಕ ರಾಜಶೇಖರ್, ಪ್ರಾಂಶುಪಾಲರಾದ ಬ್ರಹ್ಮರಂಬ ಕಾರ್ಯಕ್ರಮವನ್ನು ಕುರಿತು ಮಾತನಾಡಿದರು. ಗ್ರಂಥಪಾಲಕ ದಯಗುಣೇಶ್, ಐಕ್ಯೂಎಸಿ ಸಂಚಾಲಕ ಸತೀಶ್, ಸಹಾಯಕ ಪ್ರಾಧ್ಯಾಪಕಿ ನಂದಿನಿ ಮತ್ತು ಶಾರದಮ್ಮ ಸೇರಿದಂತೆ ಕಾಲೇಜು ಪ್ರಾಧ್ಯಾಪಕರು, ಸಿಬ್ಬಂದಿಗಳು ಹಾಗೂ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಗಾವಿಯ ವಿಧಾನ ಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ್ತಿನಲ್ಲಿ 2023ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕದ ಕುರಿತು ಮಾತನಾಡಿದರು.

## ಗಮಕ ವಾಚನ ಕಾರ್ಯಕ್ರಮ

**ಚಿತ್ರದುರ್ಗ:** ನಗರದ ಗಮಕ ಕಲಾಭಿಮಾನಿಗಳ ಸಂಘ, ಜೆಸಿಆರ್ ಗಣಪತಿ ದೇವಾಲಯ ಸಮಿತಿ ಹಾಗೂ ದಿ ಮರ್ಚೆಂಟ್ಸ್ ಸೌಹಾರ್ದ ಸಹಕಾರ ಬ್ಯಾಂಕ್ ನಿಯಮಿತ ಚಿತ್ರದುರ್ಗ, ಇವರುಗಳ ಸಹಯೋಗದಲ್ಲಿ ಮಾಸಿಕ ಗಮಕ ವಾಚನ ವ್ಯಾಖ್ಯಾನ ಕಾರ್ಯಕ್ರಮವನ್ನು ಇದೇ ತಿಂಗಳ 17ರ ಭಾನುವಾರ ಸಂಜೆ 5-30 ಗಂಟೆಗೆ ಜೆಸಿಆರ್ ಗಣಪತಿ ದೇವಾಲಯದ ಅವರಣದಲ್ಲಿ ಏರ್ಪಡಿಸಲಾಗಿದೆ.

---

ಪ್ರಮುಖ ಸುದ್ದಿ

# ಗ್ರಾಮೀಣರ ಒಡನಾಟವೇ ಪಶುವೈದ್ಯರ ಸಾಹಿತ್ಯ ಕೃಷಿಗೆ ಶಕ್ತಿ

» ದಾವಣಗೆರೆ

ಗ್ರಾಮೀಣ ಜನರೊಂದಿಗಿನ ಒಡನಾಟ ಪಶು ವೈದ್ಯರಿಗೆ ಕನ್ನಡ ಸಾಹಿತ್ಯ ರಚನೆಯ ಶಕ್ತಿ ನೀಡಿದ್ದು ಇನ್ನೂ ಹೆಚ್ಚು ಹೆಚ್ಚು ಪಶುವೈದ್ಯರು ತಮ್ಮ ಅನುಭವಗಳ ಹಿನ್ನೆಲೆಯಲ್ಲಿ ಸಾಹಿತ್ಯ ಕೃಷಿಯಲ್ಲಿ ತೊಡಗಲಿ ಎಂದು ಕುವೆಂಪು ವಿವಿ ನಿವೃತ್ತ ಪ್ರೊಫೆಸರ್ ಡಾ.ಬಸವರಾಜ್ ನೆಲ್ಲಿಸರ ಹೇಳಿದರು.

ಸಾಗರ ತಾಲ್ಲೂಕಿನ ತಾಳಗುಪ್ಪ ಸಮೀಪ ಕನ್ನಡ ಪಶುವೈದ್ಯ ಸಾಹಿತ್ಯ ಪರಿಷತ್ ( ರಿ ) ವತಿಯಿಂದ ಏರ್ಪಡಿಸಿದ್ದ ಸಾಹಿತ್ಯ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.



ತಾವು ಇತ್ತೀಚೆಗೆ ಪಶುವೈದ್ಯ ಸಾಹಿತಿಗಳು ಬರೆದ ಪುಸ್ತಕಗಳನ್ನು ಓದಿದ್ದು, ಪಶುವೈದ್ಯರೇನು ಬರೆಯಬಲ್ಲರು ಎನ್ನುವ ಭಾವನೆಯಲ್ಲಿದ್ದ ನನಗೆ ಅವರ ಬರವಣಿಗೆ ಅಚ್ಚರಿಯನ್ನುಂಟುಮಾಡಿತು ವಿಜ್ಞಾನವನ್ನು ಓದಿ, ಕನ್ನಡವನ್ನು ಶಾಸ್ತ್ರೀಯವಾಗಿ ಅಭ್ಯಾಸ ಮಾಡಿರದಿದ್ದರೂ ಸೂಕ್ಷ್ಮ ಗ್ರಹಿಕೆ, ಗ್ರಾಮೀಣ ಜನರೊಂದಿಗಿನ ಒಡನಾಟ ನಿಮಗೆ ಆ ಶಕ್ತಿ ಕೊಟ್ಟಿದೆ, ಈ ಸಾಹಿತ್ಯ ಕೃಷಿ ಹೀಗೆಯೆ ಮುಂದುವರಿಯಲಿ ಎಂದು ಆಶಿಸಿದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಪಶುವೈದ್ಯ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಎಸ್. ಬಿ. ರವಿಕುಮಾರ್ ಮಾತನಾಡಿ, ಕತೆಗಾರರು ಕಥಾ ಹಂದರಕ್ಕಾಗಿ ಹುಡುಕಬೇಕು.ಆದರೆ ಪಶುವೈದ್ಯರು ಗ್ರಾಮೀಣ ಪ್ರದೇಶದ ಬಡವರ, ದನಿಯಿಲ್ಲದವರ , ಶೋಷಿತರ, ಮಹಿಳೆಯರ ಜೀವನದಲ್ಲಿ ತಮ್ಮ ದೈನಂದಿನ ವೃತ್ತಿಯ ದೆಸೆಯಿಂದಾಗಿಯೇ ಇಣುಕಿನೋಡುವ ಅವಕಾಶ ಪಡೆದಿದ್ದಾರೆ ಎಂದರು.

ಪಶು ವೈದ್ಯರು ತಮ್ಮ ವೃತ್ತಿ ಬದುಕಿನ ಉದ್ದಕ್ಕೂ ತಾವು ಕಂಡ ಬಡವರ ಜೀವನದ ಘಟನೆಗಳಿಗೆ ಸ್ವಲ್ಪ ಕಲ್ಪನೆ ಬೆರೆಸಿ ಆಕರ್ಷಕವಾಗಿ ಹೇಳುವ ನೈಪುಣ್ಯತೆಯನ್ನು ಸಾಧಿಸಿದರೆ ಅದ್ಭುತ ಸಾಹಿತ್ಯ ಕೃತಿಗಳನ್ನು ರಚಿಸಬಹುದು, ಇದಕ್ಕೆ ಡಾ. ಮಿರ್ಜಾ ಬಷೀರ್, ಡಾ. ರಮಾನಂದ ಹಾಗೂ ಡಾ. ಗವಿಸ್ವಾಮಿಯವರ ಕೃತಿಗಳ ಜನಪ್ರಿಯತೆಯೇ ಸಾಕ್ಷಿ ಎಂದು ಹೇಳಿದರು.

ಅತಿಥಿಗಳಾಗಿಡಾ.ಟಿ.ಎಸ್.ರಮಾನಂದ, ಡಾ. ಮಿರ್ಜಾ ಬಷೀರ್ ಹಾಗೂ ಡ್. ಶ್ರೀನಿವಾಸ ರೆಡ್ಡಿ ಭಾಗವಹಿಸಿದ್ದರು. ರಾಜ್ಯದ ವಿವಿಧ ಜಿಲ್ಲೆಗಳ ಪಶುವೈದ್ಯ ಲೇಖಕರು, ಸಾಹಿತ್ಯಾಸಕ್ತರು ಭಾಗವಹಿಸಿದ್ದರು.ಡಾ. ಎನ್. ಬಿ ಶ್ರೀಧರ್ ವಂದಿಸಿದರು.ನಂತರ ನಡೆದ ಪರಿಷತ್ತಿನ ಸಾಮಾನ್ಯ ಸಭೆಯಲ್ಲಿ ಸಂಘಕ್ಕೆನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಡಾ.ಎಸ್.ಬಿ.ರವಿಕುಮಾರ್, ಉಪಾಧ್ಯಕ್ಷರಾಗಿ ಡಾ.ಕೆ.ಜಿಮಹೇಶ್ವರಪ್ಪ,ಡಾ. ಎನ್. ಬಿ. ಶ್ರೀಧರ್, ಪ್ರಧಾನಕಾರ್ಯದರ್ಶಿ ಯಾಗಿ ಡಾ. ಪಿ. ರವಿಕುಮಾರ್,ಜಂಟಿ ಕಾರ್ಯದರ್ಶಿಯಾಗಿ ಡಾ. ಭರತ ಭೂಷಣ್ ಮತ್ತು ಖಜಾಂಚಿಯಾಗಿ ಡಾ. ದಯಾನಂದ ಹೆಚ್. ವಿ.ಅವಿರೋಧವಾಗಿ ಆಯ್ಕೆಯಾದರು. ಇದೇ ವೇಳೆ ಪರಿಷತ್ತಿನ ಮುಖವಾಣಿ ಪಶುವೈದ್ಯ ಲೋಕ ಪತ್ರಿಕೆಯ ಇ-ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು. ಪತ್ರಿಕೆಯ ಪ್ರಧಾನ ಸಂಪಾದಕರಾಗಿ ಡಾ. ಶಿವಕುಮಾರ ರೆಡ್ಡೇರ ಹಾಗೂ ಉಪಸಂಪಾದಕರಾಗಿ ಡಾ. ಅನಿಲ್ ಕುಮಾರ್ ಮುಗಳಿ ಆಯ್ಕೆಯಾದರು.


# ಒಳ ಮೀಸಲಾತಿ ವರದಿ ಜಾರಿಗೆ ಆಗ್ರಹ

» **ಚಿತ್ರದುರ್ಗ**

ಕಾಂತರಾಜ್ ವರದಿ ಹಾಗೂ ಸದಾಶಿವ ಆಯೋಗದ ಒಳ ಮೀಸಲಾತಿ ವರದಿಯನ್ನು ಜಾರಿಗೆ ತರುವಂತೆ ಅಹಿಂದ ಜಾತಿಗಳ ಜಾಗೃತಿ ವೇದಿಕೆಯಿಂದ ಒನಕೆ ಓಬವ್ವ ವೃತ್ತದಲ್ಲಿ ಗುರುವಾರ ಧರಣಿ ಸತ್ಯಾಗ್ರಹ ನಡೆಸಲಾಯಿತು.

ಹಿಂದುಳಿದ ಜಾತಿ ವರ್ಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಂ. ರಾಮ ಚಂದ್ರಪ್ಪ ಧರಣಿಯನ್ನುದ್ದೇಶಿಸಿ ಮಾತನಾಡುತ್ತ ಮೊದಲಿನಿಂದಲೂ ವ್ಯವಸ್ಥಿತವಾಗಿ ವಂಚನೆಗೊಳಗಾಗುತ್ತಿರುವ ಹಿಂದುಳಿದವರು, ದಲಿತರು, ಅಲ್ಪಸಂಖ್ಯಾತರು, ಶೋಷಿತ ಸಮುದಾಯವನ್ನು ಒಂದೇ ವೇದಿಕೆಗೆ ತಂದು ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗದಲ್ಲಿ ದೊಡ್ಡ ಸಮಾವೇಶ ಏರ್ಪಡಿಸಿ ಸರ್ಕಾರಕ್ಕೆ ಶಕ್ತಿ ಪ್ರದರ್ಶಿಸುವ ಮೂಲಕ ಅಹಿಂದ ಜಾತಿಗಳು ಬೇಡಿಕೆಗಳನ್ನು ಈಡೇರಿಸಿಕೊಳ್ಳಬೇಕು ಎಂದು ಹೇಳಿದರು.ಹತ್ತು ಲಕ್ಷ ಜನರನ್ನು ಸಮಾವೇಶಕ್ಕೆ ಸೇರಿಸುವ ಮೂಲಕ ಹಿಂದುಳಿದ ಜಾತಿ ವರ್ಗಗಳು ತಮ್ಮ ನ್ಯಾಯಯುತವಾದ ಬೇಡಿಕೆಗಳಿಗೆ ಪರಿಹಾರ ಕಂಡುಕೊಳ್ಳಬೇಕು.

1931 ರಲ್ಲಿ ಬ್ರಿಟೀಷರ ಕಾಲದಲ್ಲಿ ಸರ್ವೆ ಆಗಿತ್ತು.90ವರ್ಷಗಳುಕಳೆದರೂಹಿಂದುಳಿದ ಜಾತಿಗಳ ನಿಖರ ಸಮೀಕ್ಷೆಯಾಗಿರಲಿಲ್ಲ. ಅಹಿಂದ ನಾಯಕ ಸಿದ್ದರಾಮಯ್ಯನವರು ರಾಜ್ಯದ ಮುಖ್ಯಮಂತ್ರಿಯಾದ ಮೇಲೆ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ರಚಿಸಿ ಒಂದು ಲಕ್ಷ ಅರವತ್ತು ಸಾವಿರ ಶಿಕ್ಷಕರುಗಳನ್ನು ಬಳಸಿಕೊಂಡು 162 ಕೋಟಿ ರೂ.ಗಳನ್ನು ಖರ್ಚು ಮಾಡಿ ಸಮೀಕ್ಷೆ ನಡೆಸಿದ್ದಾರೆ. ಆಯೋಗದ ವರದಿಯನ್ನು ಜಾರಿಗೆ ತರುವುದು ಸರ್ಕಾರದ ಕರ್ತವ್ಯ ಎಂದು ಒಪ್ಪಿಕೊಂಡಿರುವ ಸಿದ್ದರಾಮಯ್ಯನವರ ಕೈಬಲಪಡಿಸುವುದು ಹಿಂದುಳಿದ ಜಾತಿ ವರ್ಗಗಳ ಜವಾಬ್ದಾರಿ ಎಂದು ತಿಳಿಸಿದರು.



ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಸಿ.ಕೆ.ಮಹೇಶ್ ಮಾತನಾಡಿ ಸರ್ಕಾರ ಆಳುವವರು ಬ್ರಾಹ್ಮಣ್ಯ ಮನಸ್ಸುಳ್ಳವರಾಗಿರುವುದರಿಂದ ಪ್ರಬಲ ಜಾತಿಗಳು ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಶೋಷಿತರ ಸೌಲಭ್ಯಗಳನ್ನು ಕಸಿದುಕೊಳ್ಳುತ್ತಿದ್ದಾರೆ. ಮೇಲ್ಜಾತಿಯವರು ಪಕ್ಷದ ಸಿದ್ದಾಂತಕ್ಕೆ ಬದ್ದರಾಗಿರುವುದಿಲ್ಲ. ಬದಲಾಗಿ ಜಾತಿಗಳ ಹಿತಕ್ಕೆ ಬದ್ದರಿರುತ್ತಾರೆ. ಹಿಂದುಳಿದವರು ಮೇಲ್ಜಾತಿಯವರಂತೆ ಜಾತಿಗಳಿಗೆ ಬದ್ದರಾದಾಗ ಮಾತ್ರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಬಲಿಷ್ಟರಾಗಬಹುದು ಎಂದು ಹೇಳಿದರು.

ಅಧಿಕ ಪ್ರಮಾಣದ ಸಂಪತ್ತು, ಅಧಿಕಾರ ಯಾರಿಗೆ ಸೇರಬೇಕಿತ್ತು ಎನ್ನುವುದನ್ನು ತಿಳಿದುಕೊಳ್ಳುವುದಕ್ಕೆ ಸಂಶೋಧನೆಯ ಅಗತ್ಯವಿಲ್ಲ. ನಿಸ್ಸಂದೇಹವಾಗಿ ದಲಿತ, ಹಿಂದುಳಿದ, ಅಲ್ಪಸಂಖ್ಯಾತರಿಗೆ ಸಿಗಬೇಕು. ಅಹಿಂದ ಜಾತಿಗಳ ಮತಗಳನ್ನು ಸರಕುಗಳನ್ನಾಗಿ ಮಾರ್ಪಡಿಸಿಕೊಂಡಿರುವ ಮೇಲ್ಜಾತಿಯವರು ರಾಜಕೀಯವಾಗಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಹಾಗಾಗಿ ದೊಡ್ಡ ಸಂಖ್ಯೆಯಲ್ಲಿರುವ ಅಹಿಂದ ಜಾತಿಗಳು ಇನ್ನು ಹೀನಾಯ ಸ್ಥಿತಿಯಲ್ಲಿರುವುದರಿಂದ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಶೋಷಿತರು ಜಾಗೃತರಾಗಬೇಕಿದೆ ಎಂದು ಎಚ್ಚರಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಯಾದವ ಸಮಾಜದ ಮುಖಂಡ ಸಿ.ಟಿ.ಕೃಷ್ಣಮೂರ್ತಿ ಮಾತನಾಡುತ್ತ ಅಹಿಂದ ಜಾತಿಗಳು ಶೇ.80 ರಷ್ಟಿದ್ದಾರೆನ್ನುವುದುಸತ್ಯ.ಆದರೂದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಶೋಷಿತರಿಗೆ ಸರ್ಕಾರದಿಂದ ಸಿಕ್ಕಿರುವ ಸೌಲತ್ತು ಮಾತ್ರ ತುಂಬಾ ಕಡಿಮೆ. ಇದು ಸಂವಿಧಾನದ ಆಶಯಗಳಿಗೆ ವಿರುದ್ದವಾದುದು ಎನ್ನುವುದನ್ನು ಅರಿತು ಹಿಂದಿನಿಂದಲೂ ಅಹಿಂದ ಜಾತಿಗಳು ಹೋರಾಟ ಮಾಡಿಕೊಂಡು ಬರುತ್ತಿವೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕಾಂತರಾಜ್ ವರದಿ ಹಾಗೂ ಸದಾಶಿವ ಆಯೋಗದ ಒಳ ಮೀಸಲಾತಿ ವರದಿಯನ್ನು ಜಾರಿಗೊಳಿಸಬೇಕೆಂದು ಒತ್ತಾಯಿಸಿದರು.

ಮಾಜಿ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಜಿ.ಪಿ.ಗೋಪಾಲ್, ಹಿಂದುಳಿದ ವರ್ಗಗಳ ವೇದಿಕೆ ಸದಸ್ಯ ಮೆಹಬೂಬ್‌ಪಾಷ, ಜವಳಿ ಅಭಿವೃದ್ದಿ ನಿಗಮದ ಮಾಜಿ ಅಧ್ಯಕ್ಷ ಜಯರಾಂ, ವಿಶ್ವಕರ್ಮ ಸಮಾಜದ ಮುಖಂಡ ಸುಜ್ಞಾನದೇವ್, ಪ್ರಸನ್ನಕುಮಾರ್, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್.ಮಂಜುನಾಥ್, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸ್ಪರ್ಧಾಕಾಂಕ್ಷಿ ಜೆ.ಜಿ.ಹಟ್ಟಿಯ ಡಾ.ಬಿ.ತಿಪ್ಪೇಸ್ವಾಮಿ, ನಗರಸಭೆ ಮಾಜಿ ಅಧ್ಯಕ್ಷರುಗಳಾದ ಬಿ.ಕಾಂತರಾಜ್, ಹೆಚ್.ಸಿ.ನಿರಂಜನಮೂರ್ತಿ, ಹೆಚ್. ಮಂಜಪ್ಪ, ಮಾಜಿ ಉಪಾಧ್ಯಕ್ಷರುಗಳಾದ ಡಿ.ದುರುಗೇಶ್, ಮಲ್ಲಿಕಾರ್ಜುನ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ಬಿ.ರಾಮಜ್ಜ, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಶ್ರೀರಾಂ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಎಸ್. ಎನ್.ರವಿಕುಮಾರ್ ಟಿ.ಸ್ವಾಮಿ, ಮಾರಣ್ಣ, ಉಪ್ಪಾರ ಸಮಾಜದ ಆರ್.ಮೂರ್ತಿ, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ನಗರಸಭೆ ಸದಸ್ಯರುಗಳಾದ ನಸ್ರುಲ್ಲಾ, ದೀಪು, ಮಾಜಿ ಸದಸ್ಯರುಗಳಾದ ಫಕೃದ್ದಿನ್, ತಿಪ್ಪೇಸ್ವಾಮಿ, ಲೇಖಕ ಹೆಚ್.ಆನಂದ್‌ಕುಮಾರ್, ಎಸ್. ಎಂ.ಎಸ್.ಟಿ.ಫಯಾಜ್, ಎಂ.ಪಿ.ಶಂಕರ್, ತಕ್ಕಡಿ ಸುರೇಶ್, ಮೃತ್ಯುಂಜಯ, ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಎಸ್.ಲಕ್ಷ್ಮಿಕಾಂತ್, ದಲಿತ ಮುಖಂಡ ರಘು ಇನ್ನು ಅನೇಕರು ಧರಣಿಯಲ್ಲಿ ಭಾಗವಹಿಸಿದ್ದರು.

# ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಚಾಲನೆ

» **ಪರಶುರಾಂಪುರ**

ತಾಂತ್ರಿಕ ಶಿಕ್ಷಣದ ವಿಷಯಗಳು ಇಂಗ್ಲಿಷ್ ಭಾಷೆಯಲ್ಲಿವೆ ಅವೆಲ್ಲವೂ ಕರ್ನಾಟಕ ಭಾಷೆಗೆ ತರ್ಜುಮೆಯಾದರೆ ವಿದ್ಯಾರ್ಥಿಗಳಿಗೆ ಸರಳವಾಗುವುದು ಎಂದು ದಾವಣಗೆರೆ ವಿವಿಯ ಇತಿಹಾಸ ವಿಭಾಗದ ಡೀನರು ಆದ ಡಾ.ಪಲಾಟಿ ವೆಂಕಟರಾವ್ ಮಾರುತಿರಾವ್ ತಿಳಿಸಿದರು.

ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಕಾಲೇಜು ಶಿಕ್ಷಣ ಹಾಗೂ ಕನಾ9ಟಕ ರಾಜ್ಯ ಪಾತ್ರಾಗಾರ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಎರಡು ದಿನಗಳ ರಾಷ್ಟ್ರೀಯ ವಿಚಾರಸಂಕಿರಣದಉದ್ಘಾಟನಾಸಮಾರಂಭದಲ್ಲಿ ಮಾತನಾಡಿದರು.

ಭಾಷೆ ಬಂದಷ್ಟು ಮನುಷ್ಯನ ವ್ಯಕ್ತಿತ್ವ ವಿಕಸನವಾಗುವುದರ ಜತೆ ನಮ್ಮ ಭಾಷೆಯ ಸ್ವಂತಿಕೆಯನ್ನ ಬಿಡುವಂತಿಲ್ಲ ಎಂದರು.

ಕರ್ನಾಟಕ ರಾಜ್ಯ ಪಾತ್ರಾಗಾರ ಇಲಾಖೆಯ ಉಪ ನಿರ್ದೇಶಕ ಡಾ.ನೆಲ್ಕುದ್ರಿ ಸದಾನಂದಪ್ಪ ಮಾತನಾಡಿ, ಮನುಷ್ಯನ ಬದುಕಿನಲ್ಲಿ ದಾಖಲೆಗಳು ಅವಶ್ಯ ಜತೆ ಮಹತ್ವದ್ದಾಗಿರುತ್ತದೆ.. ಮುಂದಿನ ಪೀಳಿಗೆಗೆ ಪ್ರಾದೇಶಿಕ ಹೋರಾಟದ ನೆಲೆಗಳನ್ನು ನೋಡಲು ಸಹಕಾರಿ.ಪತ್ರಗಳ ಜತೆ ನಾಡು ನುಡಿಗಾಗಿ ಮಹತ್ವದ ಧ್ವನಿ ಸುರುಳಿ ಸಂಗ್ರಹವು ಮಾಡಲಾಗುತ್ತಿದೆ.ನಿಮ್ಮಗಳ ಸುತ್ತಾ ಮುತ್ತಾ ಸ್ವಾತಂತ್ರ್ಯ ಹೋರಾಟಗಾರರು ಇದ್ದರೆ ಅವರು ಧ್ವನಿ ಸುರುಳಿ ಇಲ್ಲವೆ ಮಹತ್ವದ ದಾಖಲೆಗಳಿದ್ದಲ್ಲಿ ತಿಳಿಸಿದರೆ ಅವುಗಳನ್ನ ಸಂಗ್ರಹಿಸಿ ನಿಮ್ಮಗಳ ಹೆಸರಲ್ಲಿ ಸಂರಕ್ಷಣೆ ಮಾಡಲಾಗುವುದು ಎಂದರು.

ದಾವಣಗೆರೆ ವಿವಿಯ ಎನ್ ಎಸ್ ಎಸ್ ಸಂಯೋಜನಾಧಿಕಾರಿ ಡಾ.ಅಶೋಕ್ ಕುಮಾರ್ ವೀ.ಪಾಳೇದ ಮಾತನಾಡಿ , ವಿದ್ಯಾರ್ಥಿಗಳು ಮೊಬೈಲ್ ಗೀಳು ಬಿಟ್ಟು ಕನ್ನಡ ತನವನ್ನು ಗಟ್ಟಿಗೊಳಿಸಲು ಪುಸ್ತಕ ಓದುವ ಹವ್ಯಾಸದಲ್ಲಿ ಕತೆ , ಕಾದಂಬರಿ, ವಿಮರ್ಶಾ ಕೃತಿಗಳು ಕಡೆ ಗಮನವಿರಲಿ ಹಾಗೂ ಗ್ರಾಮೀಣ ಕಾಲೇಜಿನಲ್ಲಿ ಕನ್ನಡ ನಾಡು ನುಡಿಗಾಗಿ





ಹಮ್ಮಿಕೊಂಡಿರುವ ರಾಷ್ಟ್ರೀಯ ವಿಚಾರ ಸಂಕಿರಣ ಅವಿಸ್ಮರಣೀಯವಾಗಿದೆ ಎಂದರು.

ಪ್ರಾಂಶುಪಾಲ ಧನಂಜಯ ಮಾತನಾಡಿ, ಸದರಿ ಕಾಲೇಜಿನಲ್ಲಿ ಮೊಟ್ಟಮೊದಲು ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜನೆಯಿಂದ ಉನ್ನತ ಮಟ್ಟದ ವಿಚಾರದ ಸ್ಥಾನಕ್ಕೆ ಸಹಕಾರಿ.ಕರ್ನಾಟಕ ಏಕೀಕರಣಕ್ಕೆ ಹಲವಾರು ಸಾಕಷ್ಟು ಪರಿಶ್ರಮವಿದೆ. ಅದನ್ನ ಉಳಿಸಿಕೊಂಡು ಹೋಗುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಪ್ರಾಧ್ಯಾಪಕ ,ಎನ್ ಎಸ್ ಎಸ್ ಕಾರ್ಯಕ್ರಮಾಧಿಕಾರಿ ಡಾ.ತಿಪ್ಪೇರುದ್ರ ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ, ವಿಚಾರ ಸಂಕಿರಣಗಳು ಗ್ರಾಮೀಣ ಭಾಗದ ಪ್ರದೇಶಗಳಲ್ಲಿ ನಡೆಯುವುದೇ ಅಪರೂಪದ ಅದರಲ್ಲೂ ಈಗ ನಡೆಯುವ ಸಂಕಿರಣದಿಂದ ವಿದ್ಯಾರ್ಥಿಗಳ ಭೌತಿಕ , ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗುವ ಜತೆ ಸಂಪನ್ಮೂಲ ವ್ಯಕ್ತಿಗಳ ಉಪನ್ಯಾಸಗಳಿಂದ ವಿಚಾರ ವಿನಿಮಯ ಹಾಗೂ ಮುಂದಿನ ಜೀವನದಲ್ಲಿ ಪ್ರಗತಿ ಸಹಕಾರಿಯಾಗಲಿದೆ ಎಂದರು.

ಇದೇ ದಿನ ಕರ್ನಾಟಕ ಏಕೀಕರಣ ಚಳವಳಿ –ಹೆಜ್ಜೆ ಗುರುತುಗಳು ಹಾಗೂ ಏಕೀರಣ ಚಳುವಳಿ –ಪ್ರಾದೇಶಿಕತೆ ಎಂಬುದರ ಬಗ್ಗೆ ಎರಡು ಗೋಷ್ಠಿಗಳು ನಡೆದವು.

ಐಕ್ಯೂಸಿ ಸಂಚಾಲಕ ಹಲಸಂಗಿ ಸತೀಶ್ , ಡಾ.ರವಿಕುಮಾರ್ ,ವೈ ಲಿಂಗೇಶ್ವರ , ಪ್ರೇಮಕುಮಾರ್ , ಶ್ರೀನಿವಾಸ್ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಸಂಪನ್ಮೂಲ ವ್ಯಕ್ತಿಗಳ ಜೊತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ತಂಬಾಕು ನಿಯಂತ್ರಣ ಕಾಯ್ದೆ ಉಲ್ಲಂಘನೆ ಪತ್ತೆ ಕಾರ್ಯಾಚರಣೆ




» **ಚಿತ್ರದುರ್ಗ**

ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಚಳ್ಳಕೆರೆ ತಾಲ್ಲೂಕಿನ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ಮಾಡಿ ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಜಾಗೃತಿ ಮೂಡಿಸಲಾಯಿತು ಅಲ್ಲದೆ, ಉಲ್ಲಂಘನೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿಕೊಂಡು ದಂಡ ವಿಧಿಸಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಎಲ್ಲೆಂದರಲ್ಲಿ ಉಗಿಯದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ತಂಬಾಕು ನಿಯಂತ್ರಣ ಕಾಯ್ದೆ ಪಾಲಿಸುವಂತೆ ಅಂಗಡಿಗಳ ಮಾಲೀಕರಿಗೆ ಎಚ್ಚರಿಕೆ ನೀಡಲಾಯಿತು. ವಿವಿಧೆಡೆ ಕೋಟ್ಪಾ ಕಾಯ್ದೆ ಉಲ್ಲಂಘನೆಗೆ ಸಂಬಂಧಿಸಿದಂತೆ ಒಟ್ಟು 41 ಪ್ರಕರಣಗಳನ್ನು ದಾಖಲಿಸಿದ್ದು, 4100 ರೂ. ದಂಡ ವಿಧಿಸಲಾಯಿತು.

ತಂಬಾಕು ದಾಳಿಯಲ್ಲಿ ಜಿಲ್ಲಾ ಮಟ್ಟದ ತನಿಖಾ ತಂಡದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ. ಪ್ರಭುದೇವ್, ಚಳ್ಳಕೆರೆ ತಾಲ್ಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ತಿಪ್ಪೇಸ್ವಾಮಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಅಮೃತ್‌ರಾಜ್ ಮತ್ತು ರಾಜು ಬಿ.ಹೆಚ್, ಪೊಲೀಸ್ ಕಾನ್ಸ್‌ಟೇಬಲ್ ಮಂಜುನಾಥ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ವರುಣ್ ಟಿ, ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

### ಆದರ್ಶ ವಿದ್ಯಾಲಯದಲ್ಲಿ ಶೈಕ್ಷಣಿಕ ಸಮೀಕ್ಷೆಗಳ ಅನುಷ್ಠಾನ ಮತ್ತು ಅನುಪಾಲನೆ ಪುನಶ್ಚೇತನ ಕಾರ್ಯಾಗಾರ

# ಶೈಕ್ಷಣಿಕ ಪ್ರಗತಿ ಮುನ್ನುಡಿ ಬರೆಯುವವರು ಶಿಕ್ಷಕರು

» **ಚಳ್ಳಕೆರೆ**

ರಾಜ್ಯದಲ್ಲಿ ವಿದ್ಯಾರ್ಥಿಗಳ ಬುದ್ದಿ ಕೌಶಲ್ಯ ವೃದ್ಧಿಗೊಳಿಸಲು ಶಿಕ್ಷಣ ಇಲಾಖೆ ಅನೇಕ ನೂತನ ಯೋಜನೆಗಳನ್ನು ಜಾರಿಗೆ ತಂದಿದೆ. ವಿವಿಧ ಶೈಕ್ಷಣಿಕ ಸಮೀಕ್ಷೆಗಳ ಅನುಷ್ಠಾನ ಮತ್ತು ಅನುಪಾಲನೆ ಕುರಿತಂತೆ ಪುನಶ್ಚೇತನ ಕಾರ್ಯಗಾರವನ್ನು ಹಮ್ಮಿಕೊಳ್ಳುವ ಮೂಲಕ ಶೈಕ್ಷಣಿಕ ಪ್ರಗತಿಗೆ ಶಿಕ್ಷಣ ಇಲಾಖೆ ಮುಂದಾಗಿರುವುದು ಸಂತಸ ವಿಷಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಗುರುವಾರ ನಗರದ ಆದರ್ಶ ವಿದ್ಯಾಲಯದ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಪುನಶ್ಚೇತನ ಕಾರ್ಯಗಾರ ಬೋಧಕರಿಗೂ ಸಹ



ಪರೋಕ್ಷವಾಗಿ ಅನೇಕ ಹೊಸ ವಿಷಯಗಳ ಆವಿಷ್ಕಾರಕ್ಕೆ ಕಾರಣವಾಗಿದೆ. ಕಾರ್ಯಗಾರದಲ್ಲಿ ಪಾಲ್ಗೊಂಡ ಪ್ರತಿಯೊಬ್ಬರೂ ಶಿಕ್ಷಣ ಇಲಾಖೆಯ ಪ್ರಗತಿಯ ಬಗ್ಗೆ ಚಿಂತನೆ ನಡೆಸಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಬೋಧನೆ ನೀಡುವಲ್ಲಿ ಮುಂದಾಗಬೇಕೆಂದರು.

ಡಯಟ್ ಅಧಿಕಾರಿ ಅಶ್ವತ್ಥನಾರಾಯಣ ಮಾತನಾಡಿ, ಶಿಕ್ಷಕರು ಹಲವಾರು ವಿಚಾರಗಳ ಬಗ್ಗೆ ಚಿಂತನೆ ನಡೆಸಬೇಕಿದೆ. ಕೆಲವೊಂದು ಮಹತ್ವದ ವಿಷಯಗಳ ಬಗ್ಗೆ ಜಾಗೃತಿ ಮೂಡಿಸುವ ಇಂತಹ ಕಾರ್ಯಗಾರಗಳು ಹೆಚ್ಚು ಉಪಯುಕ್ತವಾಗುತ್ತವೆ. ಶಿಕ್ಷಕ ಇಂದು ಕಲಿತು ಕಲಿಸುವ ವಾತಾವರಣ ನಿರ್ಮಾಣವಾಗಿದೆ. ಪರಿಸ್ಥಿತಿ ಏನೇ ಇದ್ದರೂ ನಾವೆಲ್ಲರೂ ಶೈಕ್ಷಣಿಕ ಪ್ರಗತಿಯ ಬಗ್ಗೆ ಚಿಂತನೆ ನಡೆಸಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಮುಂದಾಗಬೇಕೆಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕ ಅಶೋಕರೆಡ್ಡಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ನೋಡಲ್ ಅಧಿಕಾರಿ ಪ್ರಶಾಂತ್‌ಕುಮಾರ್, ಬಸವರಾಜು, ತಿಪ್ಪೇಸ್ವಾಮಿ ಮುಂತಾದವರು ಭಾಗಹಿಸಿದ್ದರು.

## ಫಾಸ್ಟ್ ನ್ಯೂಸ್

### ಡಿ.15ರಂದು ಸಶಸ್ತ್ರಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಧ್ವಜ ಬಿಡುಗಡೆ ಸಮಾರಂಭ

» **ಚಿತ್ರದುರ್ಗ**

ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಸಶಸ್ತಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಧ್ವಜ ಬಿಡುಗಡೆ ಸಮಾರಂಭವನ್ನು ಇದೇ ಡಿಸೆಂಬರ್ 15ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಧ್ವಜ ಬಿಡುಗಡೆ ಸಮಾರಂಭದಲ್ಲಿ ಚಿತ್ರದುರ್ಗ ಜಿಲ್ಲೆಯ ಮಾಜಿ ಸೈನಿಕರು, ವೀರ ನಾರಿಯರು ಹಾಗೂ ಮಾಜಿ ಸೈನಿಕರ ಅವಲಂಬಿತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182–220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಾಯಿ, ಮಗಳು ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಚಿಕ್ಕಗೊಂಡನಹಳ್ಳಿ ಗ್ರಾಮ ನಿವಾಸಿ ಬೇಬಿ (24 ವರ್ಷ) ಮಗಳಾದ ಬಾಲಕಿ ರುತಿಕ (2 ವರ್ಷ) ಇವರು 2023ರ ಸೆಪ್ಟೆಂಬರ್ 29 ರಂದು ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ತಾಯಿ ಬೇಬಿ ಚಹರೆ ಇಂತಿದೆ. ಬೇಬಿ (24 ವರ್ಷ) ಗಂಡ ಬಸವರಾಜ, 5.5 ಅಡಿ ಎತ್ತರ, ಎಣ್ಣೆಕೆಂಪು ಬಣ್ಣ, ಸಾಧಾರಣ ಮೈಕಟ್ಟು, ದುಂಡುಮುಖ, ಕಪ್ಪು ಕೂದಲು, ಹೊಂದಿರುತ್ತಾರೆ. ಕಾಣೆಯಾದ ಮಗು ರುತಿಕ ಚಹರೆ ಇಂತಿದೆ. ರುತಿಕ (2 ವರ್ಷ) ತಂದೆ ಬಸವರಾಜ, 2.5 ಅಡಿ ಎತ್ತರ, ದುಂಡು ಮುಖ ಹೊಂದಿರುತ್ತಾರೆ. ಕಾಣೆಯಾದ ಸಮಯದಲ್ಲಿ ಬೇಬಿ ಎಂಬ ಮಹಿಳೆ, ಕೆಂಪು ಬಣ್ಣದ ಕೆಂಪು ಸೀರೆ, ಮಗು ರುತಿಕ ಧರಿಸಿದ ಬಟ್ಟೆ ಕೆಂಪು ಟಾಪ್ ಮತ್ತು ನೀಲಿ ಚಡ್ಡಿ ಧರಿಸಿರುತ್ತಾರೆ. ಈ ಮೇಲ್ಕಂಡ ಚಹರೆಯುಳ್ಳ ತಾಯಿ ಮಗಳ ಕುರಿತು ಮಾಹಿತಿ ತಿಳಿದು ಬಂದಲ್ಲಿ ನಗರ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಲ್ಯಾವಸ್ಥೆ ಹಾಗೂ ಕಿಶೋರವಸ್ಥೆ ಕಾರ್ಮಿಕ ನಿಷೇಧ: ಜನ ಜಾಗೃತಿ



» **ಚಿತ್ರದುರ್ಗ**

ಪಾನ್–ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್ ಚೈಲ್ಡ್ ಅಂಡ್ ಅಡೋಲ್ಸೆಂಟ್ ರಕ್ಷಣಾ ಕಾರ್ಯಾಚರಣೆ ಪ್ರಯುಕ್ತ ಬುಧವಾರ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ವ್ಯಾಪ್ತಿಯಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರವಸ್ಥೆ ಕಾರ್ಮಿಕ ನಿಷೇಧ 1986ರ ಕಾಯಿದೆ ಅಡಿ ಅನಿರೀಕ್ಷಿತ ದಾಳಿ ಕೈಗೊಳ್ಳಲಾಯಿತು. ದಾಳಿ ಸಂದರ್ಭದಲ್ಲಿ ವಿವಿಧ ವಾಣಿಜ್ಯ ಸಂಸ್ಥೆಗಳಾದ ಹೋಟೆಲ್, ಗ್ಯಾರೇಜ್, ಬೇಕರಿ ಅಂಗಡಿಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಿ ಸ್ಟಿಕರ್ಸ್ ಹಾಗೂ ಕರಪತ್ರಗಳನ್ನು ಸಂಸ್ಥೆಯ ಮಾಲೀಕರಿಗೆ ನೀಡುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಯಿತು. ತಂಡದಲ್ಲಿ ಹಿರಿಯೂರು ಕಾರ್ಮಿಕ ನಿರೀಕ್ಷಕ ಅಲ್ಲಾಬಕ್ಷ್, ಜಿಲ್ಲಾ ಬಾಲಕಾರ್ಮಿಕ ಯೋಜನೆ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಟಿ.ತಿಪ್ಪೇಸ್ವಾಮಿ, ಜವನಗೊಂಡನಹಳ್ಳಿ ಆರಕ್ಷಕ ಠಾಣೆ ಪೊಲೀಸ್ ಸಿಬ್ಬಂದಿ ಈರಣ್ಣ ಸಾಲೋಟಗಿ ಇದ್ದರು.

### ಎನ್.ಭೀಮಪ್ಪ ನಿಧನ

» **ಚಿತ್ರದುರ್ಗ**

ಜೆಡಿಎಸ್. ಮಾಜಿ ಜಿಲ್ಲಾಧ್ಯಕ್ಷ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಮೀರಾಸಾಬಿಹಳ್ಳಿ ಎನ್.ಭೀಮಪ್ಪ(85)ಗುರುವಾರ ನಿಧನರಾಗಿದ್ದಾರೆ. ಸರಳ, ಸಜ್ಜನ ರಾಜಕಾರಣಿಯಾಗಿದ್ದ ಎನ್.ಭೀಮಪ್ಪ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮೀರಾಸಾಬಿಹಳ್ಳಿಯ ತೋಟದಲ್ಲಿ ಗುರುವಾರ ನಡೆಯಿತು ಎಂದು ಕುಟುಂಬದವರು ತಿಳಿಸಿದ್ದಾರೆ.



ಸಂತಾಪ : ಎನ್.ಭೀಮಪ್ಪನವರ ನಿಧನಕ್ಕೆ ಜೆಡಿಎಸ್.ರಾಷ್ಟ್ರಾಧ್ಯಕ್ಷ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ, ರಾಜ್ಯ ಉಪಾಧ್ಯಕ್ಷ ಬಿ.ಕಾಂತರಾಜ್, ಜೆಡಿಎಸ್.ಜಿಲ್ಲಾಧ್ಯಕ್ಷ ಎನ್. ಜಯಣ್ಣ, ಮಾಜಿ ಜಿಲ್ಲಾಧ್ಯಕ್ಷ ಡಿ.ಯಶೋಧರ, ಜಿಲ್ಲಾ ಕಾರ್ಯಾಧ್ಯಕ್ಷ ಜಿ.ಬಿ.ಶೇಖರ್, ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ತಾಲ್ಲೂಕು ಅಧ್ಯಕ್ಷ ಸಣ್ಣತಿಮ್ಮಣ್ಣ ಇವರುಗಳು ಸಂತಾಪ ಸೂಚಿಸಿದ್ದಾರೆ.

# ರೈತರಿಗೆ ಅನ್ಯಾಯ ಆಗಲು ಬಿಡುವುದಿಲ್ಲ: ಸಿದ್ದು

» ಬೆಳಗಾವಿ



ರೈತರಿಗೆ ಅನ್ಯಾಯ ಆಗಲು ಬಿಡುವುದಿಲ್ಲ– ಕಂಪನಿ ಹೆಸರಲ್ಲಿ ಭೂಮಿ ಪಡೆದು ರಿಯಲ್ ಎಸ್ಟೇಟ್ ವ್ಯವಹಾರ ನಡೆಸಲು ಅವಕಾಶ ಕೊಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಡೂರಿನ ರೈತ ನಿಯೋಗಕ್ಕೆ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಸಂಡೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕುಡುತಿನಿಯಲ್ಲಿ ಅರ್ಸೆಲರ್ ಮಿತ್ತಲ್ ಇಂಡಿಯಾ ಲಿ.; ಉತ್ತಮ್ ಗಾಲ್ವಾ ಫೆರೋಸ್ ಕಂಪನಿ ಲಿ. ಹಾಗೂ ಮೆ. ಕರ್ನಾಟಕ ವಿಜಯನಗರ ಸ್ಟೀಲ್ ಲಿಮಿಟೆಡ್ ಕಾರ್ಖಾನೆಗಳನ್ನು ಪ್ರಾರಂಭಿಸುವ ಕುರಿತು ಸಂಡೂರು ಶಾಸಕ ಈ.ತುಕಾರಾಮ್ ನೇತೃತ್ವದ ನಿಯೋಗದ ಜತೆ ಸಭೆ ನಡೆಸಿದ ಬಳಿಕ ಮೇಲಿನಂತೆ ತಿಳಿಸಿದರು.

ಈ ಉದ್ದೇಶಿತ ಕಾರ್ಖಾನೆಗಳಿಗಾಗಿ ಭೂಸ್ವಾಧೀನ ಸಂದರ್ಭದಲ್ಲಿ ದರ ನಿಗದಿಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯು ಅನ್ಯಾಯವೆಸಗಿದೆ ಎಂಬ ರೈತರ ಆರೋಪದ ಕುರಿತಂತೆ ಪರಿಶೀಲಿಸಿ, ಸಮಸ್ಯೆ ಬಗೆಹರಿಸುವುದಾಗಿ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಸಭೆಯಲ್ಲೇ ಭರವಸೆ ನೀಡಿದರು.

ಅರ್ಸೆಲರ್ ಮಿತ್ತಲ್ ಕಾರ್ಖಾನೆಗಾಗಿ ನಡೆಸಿರುವ ಭೂಸ್ವಾಧೀನ ಕುರಿತಂತೆ, ರೈತರಿಗೆ ನೀಡಿರುವ ಪರಿಹಾರಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಸುಪ್ರೀಂ ಕೋರ್ಟಿನ ತೀರ್ಪಿನ ಬಗ್ಗೆ ಅಡ್ವೋಕೇಟ್ ಜನರಲ್ ಅವರ ಜೊತೆಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸಭೆಯಲ್ಲಿ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ, ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ನಾಗೇಂದ್ರ, ಸಂಡೂರು ಶಾಸಕ ಇ.ತುಕಾರಾಮ್, ಜಿಲ್ಲೆಯ ಶಾಸಕರುಗಳಾದ ಕಂಪ್ಲಿ ಗಣೇಶ್, ನಾ.ರಾ.ಭರತ್ ರೆಡ್ಡಿ, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಕಾರ್ಯದರ್ಶಿ ಡಾ.ಕೆ.ವಿ. ತ್ರಿಲೋಕಚಂದ್ರ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ.ಎಸ್. ಸೆಲ್ವಕುಮಾರ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶೇಂಗಾಗೆ ವಿಶೇಷ ಪ್ಯಾಕೇಜ್ ಘೋಷಿಸಿ

» ಮೊದಲ ಪುಟದಿಂದ




ಆದರೆ ಮುಂದೆ ಬಂದ ಸರ್ಕಾರಗಳು ಅನುದಾನವನ್ನು ತಡೆ ಹಿಡಿದಿವೆ. ಕೂಡಲೇ ಈ ಅನುದಾನವನ್ನು ಒದಗಿಸಬೇಕು ಎಂದು ಶಾಸಕ ಟಿ.ರಘುಮೂರ್ತಿ ಆಗ್ರಹಿಸಿದರು.

**ಶೇಂಗಾ ಬೆಳೆಗೆ ವಿಶೇಷ ಪ್ಯಾಕೇಜ್ ಘೋಷಿಸಿ:** ಚಳ್ಳಕೆರೆ ತಾಲ್ಲೂಕಿನಲ್ಲಿ ಈ ಬಾರಿ ಸಂಪೂರ್ಣ ಬರ ಆವರಿಸಿದೆ. ಒಟ್ಟು 85,680 ಹೆಕ್ಟೇರ್ ಕೃಷಿ ಭೂಮಿಯಲ್ಲಿ 72,650 ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬೆಳೆಯುತ್ತಾರೆ. ಈ ಬಾರಿ ಬೆಳೆ ಸಂಪೂರ್ಣ ಹಾಳಗಿದ್ದು, ಸರ್ಕಾರ ಶೇಂಗಾ ಬೆಳೆಗೆ ವಿಶೇಷ ಪ್ಯಾಕೇಜ್ ಘೋಷಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಪರುಶುರಾಂಪುರವನ್ನು ತಾಲ್ಲೂಕು ಕೇಂದ್ರವಾಗಿ ಮಾಡಬೇಕು. ಚಳ್ಳಕೆರೆ ನಗರದಲ್ಲಿ ಯುಜಿಡಿ ನಿರ್ಮಾಣಕ್ಕೆ ಅನುದಾನ ನೀಡಬೇಕು. ತಾಲ್ಲೂಕಿ ಪ್ರತಿ ಹೋಬಳಿಯಲ್ಲೂ ಗೋಶಾಲೆ ತರೆಯಲು ಅನುಮತಿಸಿ ಸಹಾಯ ಒದಗಿಸಬೇಕು. ಅರೆ ಅಲೆಮಾರಿ ಹಾಗೂ ಅಲೆಮಾರಿ ಜನಾಂಗವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮನೆಗಳನ್ನು ಮಂಜೂರು ಮಾಡುವಂತೆ ಶಾಸಕ ಟಿ.ರಘುಮೂರ್ತಿ ಕೋರಿದರು. ಬರಗಾಲದ ಪರಿಹಾರ ಮೊತ್ತವನ್ನು ಸ್ವಯಂಚಾಲಿತವಾಗಿ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಕಂದಾಯ ಸಚಿವ ಕೃಷ್ಣಭೈರೇಗೌಡ ಚಳ್ಳಕೆರೆ ತಾಲ್ಲೂಕು ಆಯ್ಕೆ ಮಾಡಿಕೊಂಡಿದ್ದಕ್ಕೆ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸಿದರು.

### ಸಂವಿಧಾನ ಜಾಗೃತಿ ಅಭಿಯಾನ ಡಿ.16ರಂದು

» ಚಳ್ಳಕೆರೆ

ಅಂಬೇಡ್ಕರ್‌ರವರ ಪರಿನಿಬ್ಬಾಣ ದಿನದ ಅಂಗವಾಗಿ ಸಂವಿಧಾನ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಡಿ.16ರ ಶನಿವಾರ ಬೆಳಗ್ಗೆ 10ಕ್ಕೆ ನಗರದ ಬಿಇಒ ಕಚೇರಿ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ(ಪರಿವರ್ತನವಾದ) ಜಿಲ್ಲಾ ಸಂಘಟನಾ ಸಂಚಾಲಕ ದ್ಯಾವರನಹಳ್ಳಿ ಸುರೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಕಾರ್ಯಕ್ರಮವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಜಿಲ್ಲಾ ಪ್ರಧಾನ ಸಂಚಾಲಕ ಹೆಗ್ಗೆರೆ ಕೆ.ಮಂಜುನಾಥ ವಹಿಸುವರು. ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಆಕಾಂಕ್ಷಿ ಡಾ.ಬಿ.ತಿಪ್ಪೇಸ್ವಾಮಿ, ರಾಜ್ಯ ಪ್ರಧಾನ ಸಂಚಾಲಕ ಎಂ.ಗೋವಿಂದರಾಜು, ಡಿಎಸ್‌ಎಸ್ ಹಿರಿಯ ಹೋರಾಟಗಾರ ಶ್ರೀಧರಕಲಿವೀರ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ರಾಮಮೂರ್ತಿಸ್ವಾಮೀಜಿ ದಿವ್ಯಸಾನಿಧ್ಯದಲ್ಲಿ ಚರ್ಮಕಾರರಿಗೆ ಸನ್ಮಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದು, ಚಿತ್ರದುರ್ಗ ಹಾಗೂ ಚಳ್ಳಕೆರೆ ಸಮಿತಿಗಳ ಆಶ್ರಯದಲ್ಲಿ ಈ ಕಾರ್ಯಕ್ರಮ ಆಯೋಜಿಸಿದೆ ಎಂದು ತಿಳಿಸಿದ್ದಾರೆ.



ಐತಿಹಾಸಿಕ ಚಿತ್ರದುರ್ಗ ನಗರದ ಧರ್ಮಶಾಲಾ ರಸ್ತೆಯಲ್ಲಿ ಇರುವ ಶ್ರೀ ಸೀತಾರಾಮ ಮಂದಿರದಲ್ಲಿ ಗುರುವಾರ ದಂದು ಕಡೆ ಕಾರ್ತಿಕ ಪ್ರಯುಕ್ತ ಶ್ರೀ ರಾಮನಿಗೆ ವಿಶೇಷ ಪೂಜೆ ಹಾಗು ದೀಪಾಲಂಕಾರದೊಂದಿಗೆ ಕಾರ್ತಿಕ ಮಹೋತ್ಸವ ಆಚರಣೆ ಮಾಡಲಾಯಿತು...

# ವಿದ್ಯುತ್ ಅವಘಡಗಳಲ್ಲಿ ಬೆಸ್ಕಾಂ ಇಲಾಖೆ ದೂಷಿಸುವುದು ಸರಿಯಲ್ಲ: ರಾಜು

» ಚಳ್ಳಕೆರೆ



ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಶಾಕ್‌ನಿಂದ ಸಾವು ಸಂಭವಿಸುತ್ತಿದ್ದು, ಇದಕ್ಕೆ ವಿದ್ಯುತ್ ಇಲಾಖೆಯ ಮೇಲೆ ಆರೋಪ ಮಾಡುತ್ತಿರುವುದು ಕಂಡುಬಂದಿದೆ. ಆದರೆ, ಸುರಕ್ಷಿತ ಕ್ರಮಗಳನ್ನು ಮುಂಜಾಗ್ರತಾವಾಗಿ ಕೈಗೊಳ್ಳದ ಹಿನ್ನೆಲೆಯಲ್ಲಿ ಅಪಘಾತ ಸಂಭವಿಸುತ್ತಿದೆ ವಿನಃ ಇದರಲ್ಲಿ ವಿದ್ಯುತ್ ಸರಬರಾಜು ಕಂಪನಿಯ ಹೊಣೆ ಮಾಡುವುದು ಸರಿಯಲ್ಲವೆಂದು ಬೆಸ್ಕಾಂ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಜು ತಿಳಿಸಿದರು.

ಅವರು, ನಗರದ ವಿಶ್ವಭಾರತಿ ಪ್ರೌಢಶಾಲೆಯಲ್ಲಿ ಗುರುವಾರ ವಿದ್ಯುತ್ ಜಾಗೃತಿ ಕುರಿತು ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಬೆಸ್ಕಾಂ ಇಲಾಖೆ ಅನೇಕ ಸಂದರ್ಭಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವ ಹಿನ್ನೆಲೆಯಲ್ಲಿ ಸಾವಿನ ಸಂಖ್ಯೆ ಕಡಿಮೆಯಾಗಿದೆ. ವಿದ್ಯುತ್ ಅಪಾಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಶಾಲಾ ಮಟ್ಟದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಂಡು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ, ಗ್ರಾಮೀಣ ಭಾಗದಲ್ಲೂ ಜಾಗೃತಿ ಅಭಿಯಾನವನ್ನು ನಡೆಸಲಾಗುವುದು ಎಂದರು.

ತಳಕು ಬೆಸ್ಕಾಂ ಅಧಿಕಾರಿ ಮಮತ ಮಾತನಾಡಿ, ಮನೆ ಹಾಗೂ ಅಂಗಡಿಗಳಲ್ಲಿ ವಿದ್ಯುತ್ ಶಾಕ್ ಸರ್ಕ್ಯೂಟ್‌ನಿಂದ ಹೆಚ್ಚು ಅಪಾಯವಾದ ಮಾಹಿತಿ ಇದೆ. ಆದರೆ, ಇದನ್ನು ನಿಯಂತ್ರಿಸಲು ಹಾಗೂ ಸಾವನ್ನು ಸಹ ತಪ್ಪಿಸಲು ಹಲವಾರು ಮಾರ್ಗೋಪಾಯಗಳಿವೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಪ್ರಬಂಧ ಮತ್ತು ಭಾಷಣದ ಮೂಲಕ ಜಾಗೃತಿ ಮೂಡಿಸುವ ಕಾರ್ಯಕ್ಕೆ ಇಲಾಖೆ ಮುಂದಾಗಿದೆ ಎಂದರು.

ಶಿಕ್ಷಣ ಇಲಾಖೆಯ ನೋಡಲ್ ಅಧಿಕಾರಿ ವಿ.ಈರಸ್ವಾಮಿ ಮಾತನಾಡಿ, ಬೆಸ್ಕಾಂ, ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿಗಳ ಕಚೇರಿ ಸಮಗ್ರ ಶಿಕ್ಷಣ ಕರ್ನಾಟಕ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಹಯೋಗದಲ್ಲಿ ವಿದ್ಯುತ್ ಸುರಕ್ಷತಾ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಪ್ರಬಂಧ ಮತ್ತು ಭಾಷಣ ಸ್ಪರ್ಧೆಯನ್ನು ಏರ್ಪಡಿಸಿದೆ. ವಿದ್ಯುತ್ ಸರಬರಾಜಿನಲ್ಲಿ ಆಗುವ ವ್ಯತ್ಯಯ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕುರಿತು ವಿದ್ಯಾರ್ಥಿಗಳೊಂದಿಗೆ ಹಲವಾರು ಮಾಹಿತಿಗಳನ್ನು ಹಂಚಿಕೊಂಡು ನಂತರ ಸ್ಪರ್ಧೆ ಏರ್ಪಡಿಸಿದೆ. ವಿದ್ಯಾರ್ಥಿಗಳು ಗ್ರಾಮೀಣ ಭಾಗದಲ್ಲೂ ಜಾಗೃತಿ ಮೂಡಿಸುವಲ್ಲಿ ಮುಂದಾಗಬೇಕು ಎಂದರು. ಬೆಸ್ಕಾಂ ಎಇ ದೇವರಾಜು, ಇಸಿಒ ಮಾರುತಿಭಂಡಾರಿ, ಗಿರೀಶ್‌ಬಾಬು ಮುಂತಾದವರು ಉಪಸ್ಥಿತರಿದ್ದರು.

### ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ ಉದ್ಘಾಟನಾ ಸಮಾರಂಭ



■ ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಿ.19 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಶಾಮನೂರು ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಪ್ರಸಕ್ತ ಸಾಲಿನ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ವಿಕಸನದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಜಿ.ಎಂ. ಸಿದ್ದೇಶ್ವರ, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ಮಹಾನಗರ ಪಾಲಿಕೆ ಉಪಮಹಾ ಪೌರರಾದ ಯಶೋಧ ಯಗ್ಗಪ್ಪ ಹಾಗೂ ಸದಸ್ಯರಾದ ಕಲ್ಲಳ್ಳಿ ನಾಗರಾಜ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿಗೌಡ, ಎಸ್.ಎಲ್ ಭೋಜೇಗೌಡ, ವೈ.ಎ. ನಾರಾಯಣಸ್ವಾಮಿ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಚಿತ್ರದುರ್ಗ ಸಿ.ಟಿ.ಇ ಪ್ರಾಚಾರ್ಯರು ಹಾಗೂ ಪ.ನಿ ಸಹನಿರ್ದೇಶಕಿ ಟಿ.ಜಿ ಲೀಲಾವತಿ, ಶಾಮನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎಸ್.ಡಿ.ಎಂ.ಸಿ ಅಧ್ಯಕ್ಷ ಕೆ.ಎನ್ ನಾಗರಾಜ್, ಶಾಮನೂರು ಸರ್ಕಾರಿ ಪ್ರೌಢಶಾಲೆ ಶಾಲೆ ಎಸ್.ಡಿ.ಎಂ.ಸಿ ಅಧ್ಯಕ್ಷ ಜಿ.ಆರ್ ಮುದ್ದೇಗೌಡಪ್ಪ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕಿ ಎಸ್. ಗೀತಾ ಹಾಗೂ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಕೊಟ್ರೇಶ್ ಪಾಲ್ಗೊಳ್ಳುವರು.

# ಸಂಸತ್ತಲ್ಲಿ ಸ್ಮೋಕ್ ಬಾಂಬ್: ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಿ; ನೇರಲಗುಂಟೆ ರಾಮಪ್ಪ

» ಚಳ್ಳಕೆರೆ



ನವದೆಹಲಿಯ ನೂತನ ಪಾರ್ಲಿಮೆಂಟ್ ಭವನದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಇಬ್ಬರು ಅಪರಿಚಿತ ವ್ಯಕ್ತಿಗಳು ಒಳನುಗ್ಗಿ ಸ್ಮೋಕ್ ಬಾಂಬ್ ತೆರೆದು ಗಲಭೆ ಉಂಟು ಮಾಡಿದ್ದು ಇದು ಭದ್ರತ ಲೋಪವಾಗಿದ್ದು ಘಟನೆಗೆ ಮೈಸೂರು ಸಂಸದ ಪ್ರತಾಪ್‌ಸಿಂಹ ವಿತರಿಸಿ ಪಾಸ್ ಮೂಲ ಕಾರಣವಾಗಿದೆ. ಈ ಬಗ್ಗೆ ಪೊಲೀಸರು ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಲೋಕಸಭಾ ಚುನಾವಣೆ ಕಾಂಗ್ರೆಸ್ ಟಿಕೆಟ್ ಆಂಕಾಕ್ಷಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರಲಗುಂಟೆ ರಾಮಪ್ಪ ಕೇಂದ್ರಸರ್ಕಾರವನ್ನು ಆಗ್ರಹಿಸಿದ್ದಾರೆ.

ಅವರು, ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿ, ಕಳೆದ 21 ವರ್ಷಗಳ ಹಿಂದೆ ಇದೇ ಸಂದರ್ಭದಲ್ಲಿ ಪಾರ್ಲಿಮೆಂಟ್ ಭವನಕ್ಕೆ ನುಗ್ಗಿ ದಾಂಧಲೆವೆಬ್ಬಿಸಿದ ಪ್ರಕರಣ ಇನ್ನೂ ಹಸಿರಾಗಿರುವಾಗಲೇ ಮತ್ತೊಮ್ಮೆ ನೂತನ ಪಾರ್ಲಿಮೆಂಟ್ ಭವನದೊಳಗೆ ಕೆಲವು ದುಷ್ಕರ್ಮಿಗಳು ಇಂತಹ ದುಷ್ಕೃತ್ಯವನ್ನು ನಡೆಸಿ ಜನಪ್ರತಿನಿಧಿಗಳನ್ನು ಭಯಭೀತರನ್ನಾಗಿ ಮಾಡಿದ್ದಾರೆ. ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ತಪ್ಪಿತಸ್ಥರ ವಿರುದ್ಧಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಈ ಘಟನೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಪರಿಶೀಲನೆ ನಡೆಸಿ ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂದು ಅವರು ತಿಳಿಸಿದ್ದಾರೆ. ಎಚ್. ಕನಕದಾಸ್, ಜೆ.ಎಚ್.ರವೀಂದ್ರ ಮುಂತಾದವರು ಇದ್ದರು.

### ಕಾನೂನು ಅರಿವು ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಾನವ ಹಕ್ಕುಗಳ ಬಗ್ಗೆ ಕಾನೂನು ಅರಿವು–ನೆರವು ಕಾರ್ಯಕ್ರಮ ಡಿ. 15 ರಂದು ಸಂಜೆ 06 ಗಂಟೆಗೆ ನಗರದ ದವಳಗಿರಿ ಬಡಾವಣೆಯಲ್ಲಿರುವ ಮೆಟ್ರಿಕ್ ನಂತರದ ಸರ್ಕಾರಿ ಕಾನೂನು ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಆಯೋಜಿಸಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ ಕೆಂಪರಾಜು ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ, ಉಪನ್ಯಾಸ ನೀಡುವರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ವಿಜಯ್, ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ವಿ. ಕೃಷ್ಣಮೂರ್ತಿ, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ನಮ್ಮ ಆರೋಗ್ಯ

# ಒಣ ಕೊಬ್ಬರಿ

### ಪ್ರತಿದಿನ ಸೇವನೆಯಿಂದ ಆರೋಗ್ಯಕ್ಕೆ ಪ್ರಯೋಜನಗಳು



ತೆಂಗಿನ ಕಾಯಿ ಆಹಾರದ ರುಚಿಯನ್ನುಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅದಕ್ಕಾಗಿಯೇ ಅನೇಕ ಇದನ್ನು ಅಡುಗೆಯಲ್ಲಿ ಹೆಚ್ಚು ಬಳಸುತ್ತಾರೆ. ಪ್ರಾಚೀನ ಕಾಲದಿಂದಲೂ ಆಹಾರದಲ್ಲಿ ತೆಂಗಿನಕಾಯಿಯನ್ನು ಬಳಸುವುದು ವಾಡಿಕೆ. ಒಣ ಕೊಬ್ಬರಿಯನ್ನು ಪ್ರತಿದಿನ ಸೇವಿಸುವುದರಿಂದ ದೇಹಕ್ಕೆ ಹಲವಾರು ಪ್ರಯೋಜನಗಳಿವೆ.

ಒಣ ಕೊಬ್ಬರಿ ದೇಹಕ್ಕೆ ಶಕ್ತಿ ತುಂಬಲು ಪರಿಣಾಮಕಾರಿಯಾಗಿ ಸಹಾಯ ಮಾಡುತ್ತದೆ. ಅದರಲ್ಲೂ ಚಳಿಗಾಲದಲ್ಲಿ ಒಣ ಕೊಬ್ಬರಿ ತಿನ್ನುವುದರಿಂದ ಹಲವಾರು ಪ್ರಯೋಜನಗಳಿವೆ ಎನ್ನುತ್ತಾರೆ ಆರೋಗ್ಯ ತಜ್ಞರು. ಇದರ ಗುಣಲಕ್ಷಣಗಳು ದೇಹದಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತವೆ. ಇದರಿಂದಾಗಿ ಚಳಿಗಾಲದಲ್ಲಿ ಉಂಟಾಗುವ ಸೋಂಕುಗಳಿಂದ ಸುಲಭವಾಗಿ ಮುಕ್ತಿ ಪಡೆಯಬಹುದು.

ಒಣ ಕೊಬ್ಬರಿಯಲ್ಲಿ ಫೈಬರ್, ಮ್ಯಾಂಗನೀಸ್ ಮತ್ತು ತಾಮ್ರದಂತಹ ದೇಹಕ್ಕೆ ಅಗತ್ಯವಾದ ಅನೇಕ ಪೋಷಕಾಂಶಗಳಿವೆ. ಹಾಗಾಗಿ ಇದನ್ನು ಪ್ರತಿದಿನ ಆಹಾರದಲ್ಲಿ ಒಣ ಕೊಬ್ಬರಿ ಸೇವಿಸುವುದರಿಂದ ಜ್ಞಾಪಕಶಕ್ತಿ ವೃದ್ಧಿಯಾಗುತ್ತದೆ. ಅಲ್ಲದೆ ಮೆದುಳಿನಲ್ಲಿರುವ ಜೀವಕೋಶಗಳ ಸಮಸ್ಯೆಗಳು ಸುಲಭವಾಗಿ ನಿವಾರಣೆಯಾಗುತ್ತವೆ. ವಿಶೇಷವಾಗಿ ರಕ್ತಹೀನತೆ ಸಮಸ್ಯೆಯಿಂದ ಬಳಲುತ್ತಿರುವವರು ಒಣ ಕೊಬ್ಬರಿಯನ್ನು ಪ್ರತಿನಿತ್ಯ ಸೇವಿಸುವುದರಿಂದ ಉತ್ತಮ ಫಲಿತಾಂಶ ಸಿಗುತ್ತದೆ. ಇದರ ಪೌಷ್ಟಿಕಾಂಶದ ಗುಣಲಕ್ಷಣಗಳು ಕಬ್ಬಿಣದ ಕೊರತೆಯನ್ನು ಸಹ ಸುಲಭವಾಗಿ ನಿವಾರಿಸುತ್ತದೆ.

ಹೆಚ್ಚು ಒಣ ಕೊಬ್ಬರಿ ಸೇವಿಸುವುದರಿಂದ ಮಹಿಳೆಯರಿಗೆ ಪುರುಷರಿಗಿಂತ ಹೆಚ್ಚಿನ ಲಾಭವಿದೆ ಎನ್ನುತ್ತಾರೆ ಆರೋಗ್ಯ ತಜ್ಞರು. ಇದರಲ್ಲಿರುವ ಫೈಬರ್ ಮತ್ತು ಇತರ ಪೋಷಕಾಂಶಗಳು ಮಹಿಳೆಯರಲ್ಲಿ ಮೂಳೆಯನ್ನು ಬಲಗೊಳಿಸಲು ಸಹಾಯ ಮಾಡುತ್ತದೆ. ಇದಲ್ಲದೆ, ಇದು ಜೀರ್ಣಕಾರಿ ಸಮಸ್ಯೆಗಳಿಂದ ಸುಲಭವಾಗಿ ಪರಿಹಾರವನ್ನು ನೀಡುತ್ತದೆ. ಹೊಟ್ಟೆಯ ಹುಣ್ಣು ಸಮಸ್ಯೆಯಿಂದ ಬಳಲುತ್ತಿರುವವರಿಗೆ ಒಣ ಕೊಬ್ಬರಿ ತುಂಬಾ ಸಹಕಾರಿ. ಇದು ಹೃದಯ ಸಂಬಂಧಿ ಕಾಯಿಲೆಗಳನ್ನು ನಿವಾರಿಸುತ್ತದೆ. ದೇಹದಲ್ಲಿನ ಕೊಲೆಸ್ಟ್ರಾಲ್ ಅನ್ನು ಸುಲಭವಾಗಿ ಕರಗಿಸುತ್ತದೆ. ಹಾಗಾಗಿ ಒಣ ಕೊಬ್ಬರಿಯೊಂದಿಗೆ ಡ್ರೈ ಫ್ರೂಟ್ಸ್ ಬೆರೆಸಿ ಲಡ್ಡೂ ಮಾಡಿ ತಿನ್ನುವುದರಿಂದ ಒಳ್ಳೆಯ ಫಲಿತಾಂಶ ಸಿಗುತ್ತದೆ.

■ **ಸೂಚನೆ :** ಈ ಲೇಖನವು ಸಾಮಾನ್ಯ ಮಾಹಿತಿಯನ್ನು ಆಧರಿಸಿದೆ. ಇದನ್ನು ನಮ್ಮ ಜನ ಪತ್ರಿಕೆ ಖಚಿತಪಡಿಸುವುದಿಲ್ಲ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T